ಸಂಪುಟ: 06 ಸಂಚಿಕೆ: 154 ಪುಟಗಳು: 08 ಭಾನುವಾರ 16 ಆಗಸ್ಟ್ 2026
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5
# ಉದಯ ವಾಹಿನಿ
ಸರ್ವ ಸಮಾನತೆಯ
ಕನ್ನಡ ದಿನಪತ್ರಿಕೆ

## ಅಲೋಕ್ ಕುಮಾರ್ ಭೇಟಿ ಬೆನ್ನಲ್ಲೇ ಪರಪ್ಪನ ಅಗ್ರಹಾರ ಜೈಲಿನಲ್ಲಿ ಅಲ್ಲೋಲ ಕಲ್ಲೋಲ

• ಉದಯವಾಹಿನಿ, ಬೆಂಗಳೂರು

ಪ್ರಜ್ವಲ್ ರೇವಣ್ಣ ಅವರ ಬ್ಯಾರಕ್‌ನಲ್ಲಿ ಮೊಬೈಲ್ ಪತ್ತೆಯಾದ ಬೆನ್ನಲ್ಲೇ ಪರಪ್ಪನ ಅಗ್ರಹಾರ ಜೈಲಿನಲ್ಲಿ ಭದ್ರತೆಯನ್ನು ತೀವ್ರಗೊಳಿಸಿ ಹೈಪ್ರೊಫೈಲ್ ಕೈದಿಗಳ ಮೇಲೆ ಬಿಗಿ ಕಣ್ಗಾವಲು ಇಡಲಾಗಿದೆ. ಕಾರಾಗೃಹ ಡಿಜಿಪಿ ಅಲೋಕ್ ಕುಮಾರ್ ಭೇಟಿ ಬೆನ್ನಲ್ಲೇ ಪರಪ್ಪನ ಅಗ್ರಹಾರ ಜೈಲಿನಲ್ಲಿ ಅಲ್ಲೋಲ ಕಲ್ಲೋಲವಾಗಿದ್ದು, ರೇಣುಕಾಸ್ವಾಮಿ ಕೊಲೆ ಆರೋಪಿ ನಟ ದರ್ಶನ್ ಹಾಗೂ ಪವಿತ್ರಾಗೌಡಗೂ ಬಿಸಿ ತಟ್ಟಿದೆ. ನಟ ದರ್ಶನ್ ಅವರ ಬ್ಯಾರಕ್ ಸುತ್ತ ಸಿಸಿಟಿವಿ ಕಣ್ಗಾವಲು ಹೆಚ್ಚಿಸಲಾಗಿದ್ದು, ಸಹ-ಆರೋಪಿ ಪವಿತ್ರಾಗೌಡನನ್ನು 16 ಕೈದಿಗಳಿರುವ ಬ್ಯಾರಕ್‌ಗೆ ಶಿಫ್ಟ್ ಮಾಡಲಾಗಿದೆ.

ಪ್ರಜ್ವಲ್ ರೇವಣ್ಣ ಅವರ ಬ್ಯಾರಕ್‌ನಲ್ಲಿ ಮೊಬೈಲ್ ಪತ್ತೆಯಾದ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಕಾರಾಗೃಹ ಇಲಾಖೆ ಡಿಜಿಪಿ ಅಲೋಕ್ ಕುಮಾರ್ ಅವರು ಜೈಲಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಈ ಭೇಟಿಯ ನಂತರ ಜೈಲಿನಲ್ಲಿ ಮತ್ತಷ್ಟು ಬಿಗಿ ವ್ಯವಸ್ಥೆ ಕಲ್ಪಿಸಲಾಗಿದೆ. ಪ್ರಜ್ವಲ್ ರೇವಣ್ಣಗೆ ನೀಡುತ್ತಿದ್ದ ಸವಲತ್ತುಗಳನ್ನು ಸ್ಥಗಿತಗೊಳಿಸಲಾಗಿದ್ದು, ಈಗಾಗಲೇ 22 ಜನರಿದ್ದ ಬ್ಯಾರಕ್‌ಗೆ ಶಿಫ್ಟ್ ಮಾಡಲಾಗಿದೆ. ಇನ್ನು ಇದೀಗ ಅವರ ಮೇಲಿನ ಕಣ್ಗಾವಲನ್ನು ಅಧಿಕಾರಿಗಳು ಮತ್ತಷ್ಟು ಬಿಗಿಗೊಳಿಸಲಾಗಿದೆ. ಕೊಲೆ ಪ್ರಕರಣದ ಆರೋಪಿಗಳಾದ ನಟ ದರ್ಶನ್ ಹಾಗೂ ಪವಿತ್ರಾಗೌಡ ಅವರ ಮೇಲೆಯೂ ಜೈಲಾಧಿಕಾರಿಗಳು ತೀವ್ರ ನಿಗಾ ಇರಿಸಿದ್ದಾರೆ. ಜೈಲಿನ ಭದ್ರತಾ ಹಿತದೃಷ್ಟಿಯಿಂದ ಪವಿತ್ರಾಗೌಡ ಅವರ ಬ್ಯಾರಕ್ ಅನ್ನು ಅಧಿಕಾರಿಗಳು ಬದಲಾಯಿಸಿದ್ದಾರೆ.

ಬರೋಬ್ಬರಿ 16 ಖೈದಿಗಳಿರುವ ಬ್ಯಾರಕ್‌ಗೆ ಶಿಫ್ಟ್ ಮಾಡಲಾಗಿದೆ. ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿಯಾಗಿರುವ ನಟ ದರ್ಶನ್ ಅವರ ಬ್ಯಾರಕ್ ಬಳಿ ಹೆಚ್ಚಿನ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

## ನಾನು ಮಾತಾಡಲ್ಲ ಅಂದ್ರೆ ಸೈಲೆಂಟ್ ಆಗಿದ್ದೀನಿ ಅಂತಾ ಅರ್ಥ ಅಲ್ಲ: ಸಿದ್ದು ಮಾರ್ಮಿಕ ಮಾತು

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದ ಬಳಿಕ ಸಿದ್ದರಾಮಯ್ಯನವರು ಸೈಲೆಂಟ್ ಆಗಿದ್ದಾರೆ. ಬಹಿರಂಗವಾಗಿ ಯಾವುದೇ ಹೇಳಿಕೆಗಳನ್ನು ನೀಡದೇ ಸೈಲೆಂಟ್ ಮೂಡ್‌ಗೆ ಜಾರಿದ್ದಾರೆ. ಮಾಧ್ಯಮದವರು ಸಿದ್ದರಾಮಯ್ಯನವರನ್ನು ಮಾತನಾಡಿಸುವ ಪ್ರಯತ್ನ ಮಾಡಿದ್ದಾರೆ. ಆದ್ರೆ, ಸಿದ್ದರಾಂಯ್ಯ ಮಾತ್ರ, ನಾನು ಎಲ್ಲಿ ಸೈಲೆಂಟ್ ಆಗಿದ್ದೇನೆ. ನಾನು ಹೆಚ್ಚು ಮಾತಾಡುತ್ತಿಲ್ಲ ಅಷ್ಟೇ . ನಾನು ಮುಖ್ಯಮಂತ್ರಿ ಅಲ್ಲ, ಹಾಗಾಗಿ ಜವಾಬ್ದಾರಿ ಇಲ್ಲ. ನಿನ್ನೆ ಅಧಿವೇಶನದಲ್ಲಿ ಭಾಗಿ ಆಗಿದ್ದೇನೆ.

ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದೇನೆ. ಎಂದಿದ್ದಾರೆ. ಮಹಿಳಾ ಕೋಟಾ ಭರ್ತಿ ಆಗಿಲ್ಲ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿದ್ದು, ಬಿಜೆಪಿಯವರಿಗೆ ಯಾವ ನೈತಿಕತೆ ಇದೆ. ಅವರ ಸಂಪುಟದಲ್ಲಿ ಅಲ್ಪಸಂಖ್ಯಾತರಿಗೆ ಅವಕಾಶ ಕೊಟ್ಟಿಲ್ಲ. ಮಹಿಳೆಯರಿಗೆ ಸ್ಥಾನ ಕೊಡಬೇಕೆಂದು ನಾನು ಹೇಳಿದ್ದೇನೆ ಎಂದು ಹೇಳಿದರು.

## ಪಿಯು ವಿದ್ಯಾರ್ಥಿಗಳಿಗೆ ಉಚಿತ ಪಠ್ಯ ಪುಸ್ತಕ, ಕೆಪಿಎಸ್ ಶಾಲೆಗಳ ಶೀಘ್ರ ಆರಂಭ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಶಾಲಾ-ಕಾಲೇಜು ವಿದ್ಯಾರ್ಥಿಗಳ ಕಲ್ಯಾಣಕ್ಕೆ ಸರ್ಕಾರ ಬದ್ಧವಾಗಿದ್ದು, ಮೊದಲ ಮತ್ತು 2ನೇ ಪಿಯುಸಿ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ ವಿತರಣೆ ಪ್ರಕ್ರಿಯೆ ಆರಂಭಿಸಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಸಚಿವರು, ಶಾಲಾ ಪಠ್ಯಪುಸ್ತಕ, ಸಮವಸ್ತ್ರ, ಶೂ-ಸಾಕ್ಸ್ ವಿತರಣೆ ಹಾಗೂ 800 ಕೆಪಿಎಸ್ ಶಾಲೆಗಳ ಸ್ಥಾಪನೆ ಕುರಿತು ಹಲವು ಮುಖ್ಯ ನಿರ್ಧಾರಗಳನ್ನು ಹಂಚಿಕೊಂಡರು. ರಾಜ್ಯದ ಬಹುತೇಕ ಶಾಲೆಗಳಿಗೆ ಪಠ್ಯಪುಸ್ತಕಗಳ ಪೂರೈಕೆ ಪೂರ್ಣಗೊಂಡಿದೆ. ಪ್ರವೇಶಾತಿ ಹೆಚ್ಚು-ಕಡಿಮೆಯಾದ ಕಡೆಗಳಲ್ಲಿ ತಕ್ಷಣವೇ ಪಠ್ಯಪುಸ್ತಕ ತಲುಪಿಸಲು ಕ್ರಮ ಕೈಗೊಳ್ಳಲಾಗಿದೆ. ಇದರ ಜೊತೆಗೆ 1ನೇ ಮತ್ತು 2ನೇ ಪಿಯುಸಿ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ ವಿತರಿಸಲಾಗುತ್ತಿದೆ. ಸ್ಥಳೀಯವಾಗಿ ಕಳಪೆ ದರ್ಜೆಯ ಶೂಗಳನ್ನು ನೀಡಲಾಗುತ್ತಿದೆ ಎಂಬ ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ, ಸಚಿವ ಸಂಪುಟದ ಒಪ್ಪಿಗೆಯೊಂದಿಗೆ ರಾಜ್ಯಮಟ್ಟದಲ್ಲೇ ಟೆಂಡರ್ ಕರೆಯಲಾಗಿದೆ. ವಿದ್ಯಾರ್ಥಿಗಳ ಶೂ ಮತ್ತು ಸಾಕ್ಸ್ ಅಳತೆಯಲ್ಲಿ ವ್ಯತ್ಯಾಸವಿದ್ದರೆ ತಕ್ಷಣವೇ ಬದಲಾಯಿಸಿಕೊಡಲು ಅಧಿಕಾರಿಗಳಿಗೆ ಸಚಿವರು ಸೂಚಿಸಿದ್ದಾರೆ.

## ಬೆದರಿಕೆ ಹಾಕೋದು ನನ್ನತ್ರ ನಡೆಯಲ್ಲ

• ಉದಯವಾಹಿನಿ, ಬೆಂಗಳೂರು

ಸರ್ಕಾರಿ ಜಾಗಗಳಲ್ಲಿ ಕಾರ್ಯಕ್ರಮಗಳನ್ನು ನಡೆಸಲು ಹಾಗೂ ಸಾರ್ವಜನಿಕ ಸ್ಥಳಗಳನ್ನು ಬಳಸಲು ಸರ್ಕಾರದ ಪೂರ್ವಾನುಮತಿ ಕಡ್ಡಾಯಗೊಳಿಸುವ ಮಸೂದೆ ಕುರಿತಾಗಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ನೀಡಿದ ಎಕ್ಸ್‌ಕ್ಲೂಸಿವ್ ಸಂದರ್ಶನದಲ್ಲಿ ಸ್ಪಷ್ಟನೆ ನೀಡಿದ್ದಾರೆ. ಆರ್‌ಎಸ್‌ಎಸ್ ಅಥವಾ ಬಿಜೆಪಿಯನ್ನು ನಿಷೇಧಿಸುವ ಯಾವುದೇ ಉದ್ದೇಶ ಸರ್ಕಾರಕ್ಕಿಲ್ಲ. ಸುಪ್ರೀಂ ಕೋರ್ಟ್ ನೀಡಿರುವ ಆದೇಶದ ಅನ್ವಯವೇ ಈ ಕಾಯ್ದೆಯನ್ನು ಜಾರಿಗೆ ತರಲಾಗುತ್ತಿದೆ ಎಂದು ಅವರು ಹೇಳಿದ್ದಾರೆ. ''ಸರ್ಕಾರಿ ಜಾಗದಲ್ಲಿ ಏನೇ ಕಾರ್ಯಕ್ರಮ ಮಾಡಿದರೂ ಅಥವಾ ರಸ್ತೆಗಳನ್ನು ಬಳಸಬೇಕಾದರೂ ಅನುಮತಿ ಪಡೆಯುವುದು ಕಡ್ಡಾಯ. ನಾವು ಸಹ ರಸ್ತೆ ಬಳಸುವಾಗ ಅನುಮತಿ ಪಡೆಯುತ್ತೇವೆ. ಸಾರ್ವಜನಿಕ ಸ್ಥಳಗಳ ದುರುಪಯೋಗ ತಡೆಯಲು ಸುಪ್ರೀಂ ಕೋರ್ಟ್ ನೀಡಿರುವ ಆದೇಶದ ಅನ್ವಯವೇ ಈ ಮಸೂದೆಯನ್ನು ತರಲಾಗುತ್ತಿದೆ.'' ಎಂದು ಗೃಹಸಚಿವ ಹೇಳಿದ್ದಾರೆ. ''ಬಿಲ್‌ನಲ್ಲಿ ಎಲ್ಲಿಯೂ ನಿಷೇಧ ಎಂಬ ಪದ ಬಳಸಿಲ್ಲ. ಯಾವುದೇ ಸಂಘ-ಸಂಸ್ಥೆಗಳ ಹೆಸರನ್ನು ಪ್ರತ್ಯೇಕವಾಗಿ ಉಲ್ಲೇಖಿಸಿಲ್ಲ. ವಿಧಾನಸೌಧದಲ್ಲಿ ಕಾರ್ಯಕ್ರಮ ಮಾಡಬೇಕಾದರೂ ಅನುಮತಿ ಬೇಕು.

ಆರ್‌ಎಸ್‌ಎಸ್ ಅಥವಾ ಬಿಜೆಪಿಯನ್ನು ನಿಷೇಧಿಸಿದ್ದೇವೆ ಎಂದು ಯಾರು ಹೇಳಿದರು. ಬಿಲ್ ಅನ್ನು ಯಾರಾದರೂ ಸರಿಯಾಗಿ ಓದಿದ್ದಾರಾ? ಯಾರಾದರೂ ಧ್ವಜ ಹಿಡಿಯುವುದರಿಂದ ನಮಗೆ ಯಾವುದೇ ಅಭ್ಯಂತರವಿಲ್ಲ. ಸಮಾಜದಲ್ಲಿ ಪ್ರಚೋದನೆ ಸೃಷ್ಟಿಸಿದರೆ ಅಥವಾ ಪ್ರಚೋದನಕಾರಿ ಎಂದು ದೂರು ಬಂದರೆ ಖಂಡಿತವಾಗಿಯೂ ಕಾನೂನು ಕ್ರಮ ಕೈಗೊಳ್ಳಲಾಗುವುದು.

ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಭಾರತದ ಪ್ರಯಾಣಕ್ಕೆ ಅಡಿಪಾಯವಾಗಿ ಉತ್ಪಾದನೆ, ಕೃಷಿ ಮತ್ತು ಆಹಾರ ಉತ್ಪನ್ನಗಳು, ತಂತ್ರಜ್ಞಾನ ಮತ್ತು ನಾವೀನ್ಯತೆ, ಸಂಪರ್ಕ ಮತ್ತು ಮೂಲಸೌಕರ್ಯ, ರಕ್ಷಣೆ, ಹಸಿರು ಮತ್ತು ನೀಲಿ ಆರ್ಥಿಕತೆ ಮತ್ತು ಭಾರತದ ಸಾಫ್ಟ್ ಪವರ್ ಹೀಗೆ 7 ಪ್ರಮುಖ ಕ್ಷೇತ್ರಗಳು ಅಂದರೆ 'ಸಪ್ತ ಧಾರ' ಸೂತ್ರವನ್ನು ಪ್ರಧಾನಿ ನರೇಂದ್ರ ಮೋದಿ ವಿವರಿಸಿದ್ದು, ಇವು ದೇಶೀಯ ಸಾಮರ್ಥ್ಯಗಳನ್ನು ಬಲಪಡಿಸುವ ಮತ್ತು ದೇಶದ ಜಾಗತಿಕ ಉಪಸ್ಥಿತಿಯನ್ನು ವಿಸ್ತರಿಸುವತ್ತ ಗಮನಹರಿಸುತ್ತವೆ ಎಂದು ಪ್ರತಿಪಾದಿಸಿದ್ದಾರೆ. ಇಂದಿನ ಡಿಜಿಟಲ್ ಜಗತ್ತು ಮತ್ತು ತಾಂತ್ರಿಕ ಭೂದೃಶ್ಯದಲ್ಲಿ, ಚಿಪ್‌ಗಳ ಅಗಾಧ ಪ್ರಾಮುಖ್ಯತೆಯನ್ನು ನಾವು ಅರ್ಥಮಾಡಿಕೊಂಡಿದ್ದೇವೆ. ಅದು ಎಲೆಕ್ಟ್ರಾನಿಕ್ ಸರಕುಗಳಾಗಲಿ, ವೈದ್ಯಕೀಯ ಉಪಕರಣಗಳಾಗಲಿ ಅಥವಾ ಸಾರಿಗೆ ವ್ಯವಸ್ಥೆಗಳಾಗಲಿ, ಚಿಪ್‌ಗಳು ಅನಿವಾರ್ಯ. ಈ ವಲಯದಲ್ಲಿ ಭಾರತ ಸ್ವಾವಲಂಬನೆಯತ್ತ ಸಾಗಿದ್ದು, ಈಗಾಗಲೇ 3 ಪ್ರಮುಖ ಸೆಮಿಕಂಡಕ್ಟರ್ ಸ್ಥಾವರಗಳನ್ನು ಈಗಾಗಲೇ ಸ್ಥಾಪಿಸಲಾಗಿದ್ದು, ಈ ಸೌಲಭ್ಯಗಳಿಂದ ರಫ್ತಿಗೆ ಈಗಾಗಲೇ ಉತ್ಪಾದನೆ ಪ್ರಾರಂಭವಾಗಿದೆ.



# ಕೆಂಪು ಕೋಟೆಯಲ್ಲಿ ಮೊಳಗಿದ ವಂದೇ ಮಾತರಂ

## 2047ರೊಳಗೆ 'ವಿಕಸಿತ ಭಾರತದ ಗುರಿ

ಭಾರತದ ಸ್ವಾತಂತ್ರ್ಯದ 100ನೇ ವರ್ಷವಾದ 2047ರ ವೇಳೆಗೆ ದೇಶವನ್ನ ಸಂಪೂರ್ಣ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸುವ ಗುರಿಯನ್ನು ಸಾಧಿಸಲೇಬೇಕು. ಈ ಗುರಿಯನ್ನು ನಾವು ಸಾಧಿಸಲೇಬೇಕು. 140 ಕೋಟಿ ಭಾರತೀಯರೂ ಇದಕ್ಕಾಗಿ ಶ್ರಮಿಸಬೇಕು. ವಿಶ್ವದ ಅತಿದೊಡ್ಡ ಜನಸಂಖ್ಯೆಯ ರಾಷ್ಟ್ರವೊಂದು ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಸಂಕಲ್ಪ ಕೈಗೊಂಡಾಗ, ಅದು ನಮ್ಮ ಧೈರ್ಯಕ್ಕೆ ಸಾಕ್ಷಿಯಾಗುತ್ತದೆ. ಆಗ ಜಗತ್ತು ಭಾರತವನ್ನು ನೋಡುವ ದೃಷ್ಟಿಕೋನವೂ ಬದಲಾಗುತ್ತದೆ ಎಂದು ಅವರು ಹೇಳಿದರು. ಕಳೆದ 12 ವರ್ಷಗಳಲ್ಲಿ ದಲಿತರು, ಶೋಷಿತರು, ಬಡವರು, ಮಧ್ಯಮ ವರ್ಗದವರು, ಯುವಕರು ಸೇರಿದಂತೆ ಕೋಟ್ಯಂತರ ಭಾರತೀಯರು ದೇಶವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುವ ಸಂಕಲ್ಪದೊಂದಿಗೆ ಶ್ರಮಿಸಿದ್ದಾರೆ. ಈ ಪ್ರಯತ್ನಗಳ ಫಲವಾಗಿ 25 ಕೋಟಿಗೂ ಹೆಚ್ಚು ಜನರು ಬಡತನದಿಂದ ಹೊರಬಂದಿದ್ದಾರೆ ಎಂದು ಪ್ರಧಾನಿ ಮೆಚ್ಚುಗೆ ವ್ಯಕ್ತಪಡಿಸಿದರು.

**ನಮ್ಮ ಕ್ರಮಗಳಿಂದಾಗಿ ಇಂದು ದೇಶದಲ್ಲಿ ಅನಿಲ, ಇಂಧನ, ಯೂರಿಯಾಗಳ ಕೊರತೆಯಿಲ್ಲ. ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಸಂದರ್ಭದಲ್ಲಿ ಸಾಕಷ್ಟು ಇಂಧನ ಪೂರೈಕೆಯನ್ನು ಖಚಿತಪಡಿಸಿಕೊಂಡು ಸಾಮರ್ಥ್ಯ ಸಾಬೀತುಪಡಿಸಿದ್ದೇವೆ. ಬಿಕ್ಕಟ್ಟಿನ ಸಮಯದಲ್ಲಿ ಕೆಲವರು ತಮ್ಮ ವಿಲೇವಾರಿಯಲ್ಲಿ ವ್ಯವಸ್ಥೆಗಳನ್ನು ಶಸ್ತ್ರಾಸ್ತ್ರ ಮಾಡಿಕೊಂಡರು. ಆದರೆ ನಮ್ಮ ಸ್ವಾವಲಂಬನೆ ನಮಗೆ ಸಹಾಯ ಮಾಡಿತು .**

ಮೋದಿ ಪ್ರಧಾನಿ

**ಕಳೆದ 12 ವರ್ಷಗಳಲ್ಲಿ ಭಾರತವು ವಿಶ್ವದಲ್ಲೇ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಹೊರಹೊಮ್ಮಿದೆ. ದೇಶದ ರಕ್ಷಣಾ ಉತ್ಪಾದನೆ ಗಣನೀಯವಾಗಿ ಹೆಚ್ಚಾಗಿದೆ.**

**ಕೃತಕ ಬುದ್ಧಿಮತ್ತೆ, ಅಣುಶಕ್ತಿ, ದೂರಸಂಪರ್ಕ, ಡಿಜಿಟಲ್ ತಂತ್ರಜ್ಞಾನ ಹಾಗೂ ರೈಲ್ವೆ ಸೇರಿದಂತೆ ಹಲವು ಕ್ಷೇತ್ರಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ಅವರು ತಿಳಿಸಿದರು. ಕಳೆದ 12 ವರ್ಷಗಳಲ್ಲಿ ರಕ್ಷಣಾ ಉತ್ಪಾದನೆ ನಾಲ್ಕು ಪಟ್ಟು ಹೆಚ್ಚಾಗಿದೆ. ಖಾದಿ ಮತ್ತು ಗ್ರಾಮೋದ್ಯಮದ ಉತ್ಪಾದನೆ 5 ಪಟ್ಟು ಏರಿಕೆಯಾಗಿದೆ. ಎಲೆಕ್ಟ್ರಾನಿಕ್ಸ್ ಉತ್ಪಾದನೆ ಏಳು ಪಟ್ಟು ಹೆಚ್ಚಾಗಿದೆ. ಮೊಬೈಲ್ ಫೋನ್ ಉತ್ಪಾದನೆಯಲ್ಲಿ 33 ಪ್ರತಿಶತ ಏರಿಕೆಯಾಗಿದೆ. ಡಿಜಿಟಲ್ ವಹಿವಾಟುಗಳಲ್ಲಿ 100 ಪ್ರತಿಶತ ವೃದ್ಧಿಯಾಗಿದೆ. ಇಂಧನ ಭದ್ರತೆಗೆ ಹೆಚ್ಚಿನ ಒತ್ತು ನೀಡಲಾಗಿದೆ. ಇದೆಲ್ಲದರ ಜೊತೆಗೆ ಭಾರತದ ಭವಿಷ್ಯದ ಆರ್ಥಿಕ ಬೆಳವಣಿಗೆಗೆ ಇಂಧನ ಭದ್ರತೆ ಅತ್ಯಂತ ಪ್ರಮುಖವಾಗಿದೆ ಎಂದು ಪ್ರಧಾನಿ ಮೋದಿ ಹೇಳಿದರು.**

### ಭಾರತದ ಆರ್ಥಿಕ ಪ್ರಗತಿಗೆ ಮೆಚ್ಚುಗೆ

• ಉದಯವಾಹಿನಿ, ನವದೆಹಲಿ

2047ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತದ ಗುರಿಯನ್ನು ಸಾಧಿಸಲು ದೊಡ್ಡ ಕನಸು ಕಾಣುವಂತೆ ದೇಶದ ಜನತೆಗೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದರು, ಈ ಕನಸನ್ನು ಸಾಧಿಸಲು ನಾವು ಕೆಲಸ ಮಾಡುತ್ತೇವೆ ಎಂದು ಜಗತ್ತು ಭಾರತವನ್ನು ವಿಭಿನ್ನವಾಗಿ ನೋಡಬೇಕಾಗುತ್ತದೆ ಎಂದು ಹೇಳಿದರು. ಶನಿವಾರ 80ನೇ ಸ್ವಾತಂತ್ರ್ಯ ದಿನದಂದು ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಅವರು, ಸ್ವಾತಂತ್ರ್ಯದ ನಂತರ ಮೊದಲ ಬಾರಿಗೆ ಕೆಂಪು ಕೋಟೆಯ ಗೋಡೆಯಿಂದ ವಂದೇ ಮಾತರಂ ಪ್ರತಿಧ್ವನಿಸಿತು ಎಂದರು. 'ವಿಕ್ಷಿತ್ ಭಾರತ್' ಕನಸನ್ನು ಒತ್ತಿ ಹೇಳಿದ ಅವರು, ಮಹಾತ್ಮ ಗಾಂಧಿ ಸೇರಿದಂತೆ ಸ್ವಾತಂತ್ರ್ಯ ಹೋರಾಟಗಾರರಿಗೆ ಗೌರವ ಸಲ್ಲಿಸಿದರು ಮತ್ತು ಅವರ ತ್ಯಾಗಗಳನ್ನು ಸ್ಮರಿಸಿದರು.

ಭಾರತವನ್ನು ಅಭಿವೃದ್ಧಿಯ ಹಾದಿಯಲ್ಲಿ ಇರಿಸಲು ಜನರು ಪ್ರಯತ್ನಗಳನ್ನು ಮಾಡುತ್ತಿದ್ದಾರೆ ಎಂದ ಅವರು, ಕಳೆದ 12 ವರ್ಷಗಳಲ್ಲಿ ಈ ಪ್ರಯತ್ನಗಳು ಭಾರತವನ್ನು ದುರ್ಬಲವಾದ ಐದು ಆರ್ಥಿಕತೆಗಳಿಂದ ಪ್ರಮುಖ ಆರ್ಥಿಕತೆಗೆ ಕೊಂಡೊಯ್ಯುವಲ್ಲಿ ಫಲ ನೀಡಿವೆ ಎಂದು ಹೇಳಿದರು.

ಸಣ್ಣ ಕನಸುಗಳು ಇನ್ನು ಸಾಕಾಗುವುದಿಲ್ಲ, ನಾವು ದೊಡ್ಡ ಕನಸು ಕಾಣಬೇಕು.. ಭಾರತವು 2047ರ ವೇಳೆಗೆ 'ವಿಕ್ಷಿತ್ ಭಾರತ' ಆಗುವ ದೊಡ್ಡ ಕನಸನ್ನು ಹೊಂದಿದೆ. ವಿಶ್ವದ ಅತ್ಯಂತ ಜನಸಂಖ್ಯೆ ಹೊಂದಿರುವ ರಾಷ್ಟ್ರವು ಅಭಿವೃದ್ಧಿ ಹೊಂದಲು ಸಂಕಲ್ಪ ಮಾಡಿದಾಗ, ಜಗತ್ತು ನಮ್ಮನ್ನು ವಿಭಿನ್ನವಾಗಿ ನೋಡುತ್ತದೆ ಎಂದು ಪ್ರಧಾನಿ ತಿಳಿಸಿದರು. ನಮ್ಮ ಕನಸುಗಳು, ಸಂಕಲ್ಪಗಳು ದೊಡ್ಡದಾಗಿರಬೇಕು. ಏಕೆಂದರೆ ಇದು ಸಾಮರ್ಥ್ಯಗಳನ್ನು ಹೆಚ್ಚಿನ ಎತ್ತರಕ್ಕೆ ಕೊಂಡೊಯ್ಯುತ್ತದೆ ಎಂದು ಅವರು ಹೇಳಿದರು.140 ಕೋಟಿ ಜನರಿಂದ ನಡೆಸಲ್ಪಡುವ ಭಾರತವು ವಿವಿಧ ಕ್ಷೇತ್ರಗಳಲ್ಲಿ ಪ್ರಗತಿಯ ಹೊಸ ಎತ್ತರವನ್ನು ಏರುತ್ತಿದೆ ಎಂದು ಮೋದಿ ತಿಳಿಸಿದರು. ನಾವು ಇತರೆ ರಾಷ್ಟ್ರಗಳ ಮೇಲೆ ಅವಲಂಬಿತರಾಗಿರಲು ಸಾಧ್ಯವಿಲ್ಲ, ನಾವು ಸ್ವಾವಲಂಬಿಗಳಾಗಬೇಕು. ಪ್ರತಿಯೊಬ್ಬ ಭಾರತೀಯನು ಈಗ ಸ್ಥಳೀಯ, ಸ್ವದೇಶಿ ಉತ್ಪನ್ನಗಳಿಗೆ ಧ್ವನಿಗೂಡಿಸುತ್ತಿದ್ದಾನೆ ಎಂದ ಅವರು, ಭಾರತವು 'ಆತ್ಮನಿರ್ಭರ್' ಆಗುವ ಪ್ರಯತ್ನದಲ್ಲಿ ಅರೆವಾಹಕ ಸ್ಥಾವರಗಳನ್ನು ಸ್ಥಾಪಿಸಿದೆ ಮತ್ತು ಉತ್ಪಾದನೆ ಈಗಾಗಲೇ ಪ್ರಾರಂಭವಾಗಿದೆ ಎಂದು ಅವರು ಹೇಳಿದರು.

ಅನೇಕ ದೇಶಗಳು ಈಗ ನಿರ್ಣಾಯಕ ಖನಿಜಗಳಿಗಾಗಿ ಭಾರತವನ್ನು ಅವಲಂಬಿಸಿವೆ ಎಂದು ಅವರು ತಿಳಿಸಿದರು. ತಮಿಳುನಾಡಿನ ಕಲ್ಪಾಕಂನಲ್ಲಿರುವ ಪ್ರೊಟೋಟೈಪ್ ಫಾಸ್ಟ್ ಬ್ರೀಡರ್ ರಿಯಾಕ್ಟರ್ ಈ ವರ್ಷ ನಿರ್ಣಾಯಕ ಹಂತವನ್ನು ತಲುಪುವುದರೊಂದಿಗೆ, ಪರಮಾಣು ವಿದ್ಯುತ್ ಕ್ಷೇತ್ರದಲ್ಲಿ ಭಾರತ ಸ್ವಾವಲಂಬಿಯಾಗುವತ್ತ ಹೆಜ್ಜೆ ಇಟ್ಟಿದೆ ಎಂದು ಮೋದಿ ಹೇಳಿದರು. ಇಂಧನ ಭದ್ರತೆ ಇಂದಿನ ಅಗತ್ಯವಾಗಿದೆ, ಮತ್ತು ಅದಕ್ಕಾಗಿಯೇ ನಾವು ಈಗಾಗಲೇ ಈ ದಿಕ್ಕಿನಲ್ಲಿ ಕ್ರಮಗಳನ್ನು ತೆಗೆದುಕೊಂಡಿದ್ದೇವೆ. ನಾವು ಸಂಸತ್ತಿನಲ್ಲಿ ಶಾಂತಿ ಕಾಯ್ದೆಯನ್ನು ಅಂಗೀಕರಿಸಿದ್ದೇವೆ ಮತ್ತು 2047ರ ವೇಳೆಗೆ 100 ಪರಮಾಣು ವಿದ್ಯುತ್ ಸಾಧಿಸುವ ಗುರಿಯನ್ನು ಹೊಂದಿದ್ದೇವೆ ಎಂದು ಅವರು ಹೇಳಿದರು. ಭಾರತವು ಐದು ಹೊಸ ಪರಮಾಣು ರಿಯಾಕ್ಟರ್‌ಗಳನ್ನು ಸ್ಥಾಪಿಸುವ ಗುರಿಯನ್ನು ಸಹ ಹೊಂದಿದೆ.

ಕೋವಿಡ್ -19 ಸಾಂಕ್ರಾಮಿಕ ಸಮಯದಲ್ಲಿ ಭಾರತಕ್ಕೆ ಲಸಿಕೆಗಳು ಸಿಗುವುದಿಲ್ಲ ಎಂದು ಹೇಳುವ ಮೂಲಕ ಕೆಲವರು ತಪ್ಪು ಮಾಹಿತಿ'' ಹರಡುತ್ತಿದ್ದರು ಮತ್ತು ಪಶ್ಚಿಮ ಏಷ್ಯಾ ಬಿಕ್ಕಟ್ಟು ಉಲ್ಬಣಿಸಿದಾಗ, ನಮಗೆ ಪೆಟ್ರೋಲ್, ಡೀಸೆಲ್ ಅಥವಾ ಸಿಗುವುದಿಲ್ಲ ಎಂದು ನಮ್ಮನ್ನು ಹೆದರಿಸಲು ಪ್ರಯತ್ನಿಸಿದರು'' ಎಂದರು.

## ಕೆಂಪು ಕೋಟೆಯಲ್ಲಿ ಹೊಸ ಇತಿಹಾಸ

### ಭಾರತ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಲಿದೆ

## ಮೋದಿ ಧ್ವಜಾರೋಹಣ



80ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಕೆಂಪು ಕೋಟೆಯಲ್ಲಿ ನಡೆದ ಧ್ವಜಾರೋಹಣ ಕಾರ್ಯಕ್ರಮದಲ್ಲಿ 'ವಂದೇ ಮಾತರಂ' ಮೊಳಗಿತು.

ಸ್ವತಂತ್ರ ಭಾರತದ ಇತಿಹಾಸದಲ್ಲಿ ಕೆಂಪು ಕೋಟೆಯಲ್ಲಿನ ಸ್ವಾತಂತ್ರ್ಯೋತ್ಸವ ಸಂದರ್ಭದಲ್ಲಿ ಇದೇ ಮೊದಲ ಬಾರಿಗೆ ವಂದೇ ಮಾತರಂ' ಹಾಡಲಾಯಿತು. ಅದ್ದೂರಿ ಸಮಾರಂಭದಲ್ಲಿ ರಾಷ್ಟ್ರಗೀತೆ ಮೊಳಗಿದ ನಂತರ ವಂದೇ ಮಾತರಂ ಹಾಡಲಾಯಿತು. ಕೆಂಪುಕೋಟೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಸೇನಾ ಬ್ಯಾಂಡ್ ವಂದೇ ಮಾತರಂ ಗೀತೆಯನ್ನು ನುಡಿಸಿತು.

ಉಪಸ್ಥಿತರಿದ್ದ ಅತಿಥಿಗಳು ರಾಷ್ಟ್ರೀಯ ಗೀತೆಯನ್ನು ಹಾಡಿದರು. ನಂತರ ಪ್ರಧಾನಿ ಮೋದಿ ಅವರು ಧ್ವಜಾರೋಹಣ ನೆರವೇರಿಸಿದರು. ಆ ಬಳಿಕ ರಾಷ್ಟ್ರಗೀತೆಯನ್ನು ಪಠಿಸಲಾಯಿತು. 1875ರಲ್ಲಿ ಬಂಕಿಮ್ ಚಂದ್ರ ಚಟರ್ಜಿ ಬರೆದ 'ವಂದೇ ಮಾತರಂ' ಸ್ವಾತಂತ್ರ್ಯ ಚಳವಳಿಯ ಸಮಯದಲ್ಲಿ ಒಂದು ಘೋಷವಾಕ್ಯವಾಗಿ ಮಾರ್ಪಟ್ಟಿತು. 1950 ರಲ್ಲಿ ಸಂವಿಧಾನ ಸಭೆಯು ಇದನ್ನು ಭಾರತದ ರಾಷ್ಟ್ರೀಯ ಗೀತೆಯಾಗಿ ಅಂಗೀಕರಿಸಿತು.

## ಧ್ವಜಾರೋಹಣ ಮಾಡುವುದು ಒಂದು ಸೌಭಾಗ್ಯ, ಬಿಜೆಪಿ ರಾಜಕೀಯ ಮಾಡುತ್ತಿದೆ: ಸಚಿವ ಜಮೀರ್ ಅಹಮದ್ ಖಾನ್

• ಉದಯವಾಹಿನಿ, ಬೆಂಗಳೂರು



ಧ್ವಜಾರೋಹಣ ಮಾಡುವುದು ಒಂದು ಸೌಭಾಗ್ಯ. ಬಿಜೆಪಿ ರಾಜಕೀಯ ಮಾಡುತ್ತಿದೆ. ನಾನು ಮೊದಲು ಹಿಂದೂಸ್ತಾನಿ, ಆಮೇಲೆ ಕನ್ನಡಿಗ, ಕೊನೆಗೆ ಮುಸ್ಲಿಂ ಎಂದು ಸಚಿವ ಜಮೀರ್ ಅಹಮದ್ ಖಾನ್ ತಿಳಿಸಿದರು. ಚಾಮರಾಜಪೇಟೆಯಲ್ಲಿ ಸ್ವಾತಂತ್ರ್ಯೋತ್ಸವ ಧ್ವಜಾರೋಹಣ ಮಾಡಿ ಬಳಿಕ ಮಾತನಾಡಿದ ಅವರು, ವಿಜಯನಗರ ಜಿಲ್ಲೆಯಲ್ಲಿ ಧ್ವಜಾರೋಹಣ ಮಾಡಲಾಗುತ್ತಿಲ್ಲ ಎಂದು ಸಿಎಂಗೆ ಪತ್ರ ಬರೆದಿರುವ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಆ ತರ ತಪ್ಪು ಮಾಹಿತಿ ಕೊಟ್ಟಿದ್ದಾರೆ. ಧ್ವಜಾರೋಹಣ ಮಾಡುವುದು ಒಂದು ಅವಕಾಶ. ಅದೊಂದು ಸೌಭಾಗ್ಯ. ನಾನು ನಾಲ್ಕನೇ ಬಾರಿ ಸಚಿವನಾಗಿದ್ದೇನೆ. ಮೂರು ವರ್ಷ ವಿಜಯನಗರ ಉಸ್ತುವಾರಿ ಸಚಿವನಾಗಿ ಧ್ವಜಾರೋಹಣ ಮಾಡಿದ್ದೇನೆ ಎಂದರು. ನಾನು ಸಿದ್ದರಾಮಯ್ಯ ಸಿಎಂ ಆಗಿದ್ದಾಗಲೇ ಹೇಳಿದ್ದೆ. ಜಿಲ್ಲಾ ಉಸ್ತುವಾರಿ ಮಂತ್ರಿ ಬೇಡ ಅಂದಿದ್ದೆ. ನನಗೆ ಕೆಲಸದ ಒತ್ತಡ ಜಾಸ್ತಿ ಇದೆ. ಜಿಲ್ಲೆಯಲ್ಲಿ ಸಮಯಾವಕಾಶ ನೀಡಬೇಕಾಗುತ್ತದೆ. ಜಿಲ್ಲೆಗೆ ಸಮಯ ಕೊಡಲು ಆಗುವುದಿಲ್ಲ. ಹಾಗಾಗಿ ಜಿಲ್ಲಾ ಉಸ್ತುವಾರಿ ಬೇಡ ಅಂತ ಸಿದ್ದರಾಮಯ್ಯ ಇದ್ದಾಗಲೇ ಹೇಳಿದ್ದೇನೆ ಎಂದು ತಿಳಿಸಿದರು. ಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಪತ್ರ ಬರೆದು ಜಿಲ್ಲಾ ಉಸ್ತುವಾರಿ ಬೇಡ. ನನಗೆ ಕೆಲಸದ ಒತ್ತಡ ಹೆಚ್ಚಿದೆ. ಬೇರೆಯವರಿಗೆ ಅವಕಾಶ ಮಾಡಿಕೊಡಿ. ಸಚಿವ ಬಸವಂತಪ್ಪಗೆ ಅವಕಾಶ ಮಾಡಿ ಎಂದು ನಾನೇ ಮನವಿ ಮಾಡಿದ್ದೆ. ಒಬ್ಬ ಪೌರಕಾರ್ಮಿಕ ಒಬ್ಬ ಮಂತ್ರಿಯಾಗಿರುವುದು ನನಗೆ ಖುಷಿ ಇದೆ.

## ಸ್ವಾತಂತ್ರ್ಯ ದಿನಾಚರಣೆ ಭಾಷಣದಲ್ಲೂ ಮೋದಿ ವಿರುದ್ಧ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು

ನರೇಂದ್ರ ಮೋದಿಯವರು ಪ್ರಧಾನಿಯಾದ ಬಳಿಕ ಪ್ರಜಾಪ್ರಭುತ್ವ ವ್ಯವಸ್ಥೆ ಕುಸಿಯಲಾರಂಭಿಸಿದ್ದು, ದೇಶ ಹಲವಾರು ಸಮಸ್ಯೆಗಳಿಂದ ತೊಂದರೆಗೀಡಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಆರೋಪಿಸಿದ್ದಾರೆ. ಕೆಪಿಸಿಸಿ ಕಚೇರಿಯಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಸ್ವಾತಂತ್ರ್ಯ ಬಳಿಕ ನಮ ಭವಿಷ್ಯವನ್ನು ನಾವೇ ನಿರ್ಧರಿಸುವ ಅವಕಾಶ ಸಿಕ್ಕಿದೆ. ಅನೇಕ ಹಿರಿಯರ ತ್ಯಾಗ, ಹೋರಾಟದಿಂದಾಗಿ ನಾವು ಮುಕ್ತ ವಾತಾವರಣವನ್ನು ಅನುಭವಿಸುತ್ತಿದ್ದೇವೆ ಎಂದು ಹೇಳಿದರು. 1850ರಲ್ಲಿ ಬಹದ್ದೂರ್ ಶಾ ಜಬ್ಬಾರ್ ಅವರನ್ನು ಹೀನಾಯವಾಗಿ ಬ್ರಿಟಿಷರು ಪದಚ್ಯುತಗೊಳಿಸಿದ್ದನ್ನು ವಿರೋಧಿಸಿ ಮುಸ್ಲಿಮರು ನಂತರದ ದಿನಗಳಲ್ಲಿ ವೀರಾವೇಷದಿಂದ ಹೋರಾಟ ನಡೆಸಿದ್ದರು. ಮಹಿಳೆಯರು ಸೇರಿದಂತೆ ಅನೇಕ ಮುಸ್ಲಿಮರನ್ನು ನೇಣಿಗೇರಿಸಲಾಯಿತು. ಇಂದು ದೇಶದಲ್ಲಿ ಅಧಿಕಾರ ಹಿಡಿದಿರುವ ಆರ್‌ಎಸ್‌ಎಸ್ ಮತ್ತು ಅದರ ಹಿಂಬಾಲಕರನ್ನು ಹೊರತು ಪಡಿಸಿದರೆ, ಉಳಿದ ಎಲ್ಲರೂ ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿದರು.

ನಮಗೆ ಪ್ರಜಾಪ್ರಭುತ್ವದ ಮೌಲ್ಯಗಳು ಗೊತ್ತಿದೆ ಎಂದು ಹೇಳಿದರು. ಅಂಬೇಡ್ಕರ್ ಅವರು ಸಂವಿಧಾನ ಬರೆದು ಜಾತಿ, ಧರ್ಮ, ಭಾಷೆ. ಮೀರಿ ನಾವೆಲ್ಲಾ ಭಾರತೀಯರು ಎಂಬ ಭಾವನೆಯನ್ನು ಮೊದಲು ಹುಟ್ಟುಹಾಕಿದ್ದರು. ಸಂಸ್ಕೃತದಲ್ಲಿದ್ದ ವೇದ ಉಪನಿಷತ್ತುಗಳು, ಮಹಾಕಾವ್ಯಗಳು ಭಾರತೀಯರನ್ನು ಸಮಾನರು ಎಂದು ಕರೆಯುವ ಧೈರ್ಯ ಮಾಡಿರಲಿಲ್ಲ. ಆದರೆ ಸಂವಿಧಾನ ದುರ್ಬಲರು ಸೇರಿದಂತೆ ಎಲ್ಲರ ಪರವಾಗಿ



ನಿಂತಿತ್ತು. ಆದರ ಪರಿಣಾಮವೇ ನಾವು ಸ್ವಾತಂತ್ರ್ಯವಾಗಿ ಯೋಚಿಸಲು, ಮಾತನಾಡಲು, ಕೆಲಸಮಾಡಲು, ಕಲಿಯಲು ಮತ್ತು ನಮ ಭವಿಷ್ಯವನ್ನು ನಾವೇ ರೂಪಿಸಿಕೊಳ್ಳಲು ಅವಕಾಶವಿದೆ. ಈ ಮೌಲ್ಯವನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕು ಎಂದರು. ಭಾರತದಲ್ಲಿ ಪ್ರಜಾಪ್ರಭುತ್ವ ಯಶಸ್ವಿಯಾಗುವುದಿಲ್ಲ ಎಂಬ ಅಪನಂಬಿಕೆಯನ್ನು ನೆಹರೂ ಆಡಳಿತ ಹುಸಿಮಾಡಿತು. ವೈವಿಧ್ಯಮಯ ಭಾರತ ಸಂಸದೀಯ ವ್ಯವಸ್ಥೆಯಲ್ಲಿ ಸಾರ್ವಜನಿಕ ಮತದಾನದ ಹಕ್ಕನ್ನು ದೃಢಪಡಿಸುವ ಮೂಲಕ ಭವ್ಯ ಭಾರತಕ್ಕೆ ನೆಹರೂ ಬುನಾದಿ ಹಾಕಿದ್ದರು. ವಿರೋಧ ಪಕ್ಷಗಳ ಬಿನ್ನಭಿಪ್ರಾಯಕ್ಕೂ ಗೌರವ ನೀಡುತ್ತಿದ್ದರು ಎಂದು ಹೇಳಿದರು. ಹಿಂದಿನ ಎಲ್ಲಾ ಪ್ರಧಾನಿಗಳು ದೇಶದ ಅಭಿವೃದ್ಧಿಗಾಗಿ ತಮದೇ ಆದ ಕೊಡುಗೆ ನೀಡಿದ್ದಾರೆ.

2014ರ ಬಳಿಕ ಪ್ರಜಾಪ್ರಭುತ್ವ ಕುಸಿಯುತ್ತಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಹಿಂದೆಂದೂ ಕಾಣದಷ್ಟು ಬಿಕ್ಕಟ್ಟುಗಳನ್ನು ದೇಶ ಎದುರಿಸುತ್ತಿದೆ. ಸಂವಿಧಾನ ವಿರುದ್ಧ ಕೃತ್ಯಗಳು ಸಹಜ ಎಂಬಂತೆ ನಡೆಯುತ್ತಿವೆ. ಸಂಸತ್‌ನಲ್ಲಿ ತಮಗೆ ಬಹುಮತ ಇರುವುದರಿಂದ ಏನೂ ಬೇಕಾದರೂ ಮಾಡಬಹುದು ಎಂಬ ಸರ್ವಾಧಿಕಾರಿ ಧೋರಣೆಗೆ ಸರ್ಕಾರ ಅಂಟಿಕೊಂಡಿದೆ. ಚುನಾವಣೆ ಹೊರತುಪಡಿಸಿದರೆ, ಉಳಿದ ಯಾವ ಘಟನೆಗೂ ತಮಗೂ ಸಂಬಂಧವಿಲ್ಲ ಎಂಬಂತೆ ಪ್ರಧಾನಿಯವರು ವಿದೇಶಿ ಪ್ರವಾಸ ಮಾಡುತ್ತಲೇ ಇದ್ದಾರೆ. ಗೃಹಸಚಿವರು ತಮಗೆ ಯಾವುದೇ ಉತ್ತರದಾಯಿತ್ವವೇ ಇಲ್ಲ ಎಂಬಂತೆ ವರ್ತಿಸುತ್ತಿದ್ದಾರೆ. ಇಂತಹ ನೂರಾರು ಘಟನೆಗಳನ್ನು ದಿನನಿತ್ಯ ನೋಡುತ್ತಿದ್ದೇವೆ. ಇದು ಪ್ರಜಾಪ್ರಭುತ್ವ ಕುಸಿಯುತ್ತಿರುವ ಸಂಕೇತವಾಗಿದೆ ಎಂದು ಹೇಳಿದರು.

### ಮೋದಿ ವಿರುದ್ಧ ಗುಡುಗು

**ಭಾರತದ ರಾಜಕಾರಣವನ್ನು ನಿಯಂತ್ರಿಸುವ ಸಂವಿಧಾನ ಬಾಹಿರ ಶಕ್ತಿಗಳು ಮೊದಲು ಶಾಂತಿಧೂತ ಗಾಂಧೀಯವರನ್ನು ಕೊಲೆ ಮಾಡಿದ್ದವು. ಅನಂತರ ನಿರಂತರವಾಗಿ ಗಾಂಧಿಯವರನ್ನು ಅಪಮಾನಿಸುವ, ನೆಹರೂ ವಿರುದ್ಧ ಸುಳ್ಳುಗಳನ್ನು ಬಿತ್ತುವ ಪ್ರಯತ್ನ ಮಾಡುತ್ತಿವೆ. ಸಂವಿಧಾನಕ್ಕಿಂತಲೂ, ಸನಾತನ ಧರ್ಮವೇ ಹೆಚ್ಚು ಎಂದು ನಾಚಿಕೆ ಇಲ್ಲದೇ ವಾದಿಸಲಾಗುತ್ತಿದೆ. ಇತ್ತೀಚೆಗೆ ನಡೆಯುತ್ತಿರುವ ಪ್ರಕರಣಗಳು ದಿಗ್ಭ್ರಮೆ ಹುಟ್ಟಿಸುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು. ಚುನಾವಣಾ ಆಯೋಗದಿಂದ ಮತದಾರ ಪಟ್ಟಿ ಪರಿಷ್ಕರಣೆ ಮೂಲಕ ಕೋಟ್ಯಾಂತರ ಜನರ ಮತದಾನ ಹಕ್ಕನ್ನು ಕಸಿಯಲಾಗುತ್ತಿದೆ. ಆಯೋಧ್ಯೆ ರಾಮಮಂದಿರದಲ್ಲಿ ನಡೆದ ಅವ್ಯವಹಾರದ ಬಗ್ಗೆ ರಾಮನ ಭಕ್ತರು ಮಾತ್ರ ಚರ್ಚೆ ಮಾಡಬೇಕು. ಉಳಿದವರು ಈ ಬಗ್ಗೆ ಮಾತನಾಡುವ ಅಗತ್ಯ ಇಲ್ಲ ಎಂದು ವಾದಿಸಲಾಗುತ್ತಿದೆ ಎಂದು ಆಕ್ಷೇಪಿಸಿದರು.**

| ಈ ದಿನದ ದರ | ಪೆಟ್ರೋಲ್: 111.68₹/L | ಡೀಸೆಲ್ : 99.56₹/L | ಬಂಗಾರ: ₹ 15,513 /Gram 24ct ₹ 14,220 /Gram 22ct | ಬೆಳ್ಳಿ: ₹250.00/ |
|---|---|---|---|---|

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಂಜೆ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ:** ನೀವು ಕೆಲವು ಆಘಾತಗಳನ್ನು ಎದುರಿಸುವುದರಿಂದ ನೀವು ಬಹಳ ಧೈರ್ಯ ಶಕ್ತಿಯನ್ನು ಪ್ರದರ್ಶಿಸುವ ಅಗತ್ಯವಿದೆ. ನೀವು ನಿಮ್ಮ ಆಶಾವಾದಿ ನಿಲುವಿನಿಂದ ಇವುಗಳಿಂದ ಸುಲಭವಾಗಿ ಹೊರಬರಬಹುದು. ವಿದೇಶದಲ್ಲಿ ವ್ಯಾಪಾರ ಮಾಡುವ ಈ ರಾಶಿಚಕ್ರದ ಜನರಿಗೆ ಸಾಕಷ್ಟು ಹಣದ ಲಾಭವನ್ನು ಪಡೆಯಬಹುದು.

**ವೃಷಭ:** ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು.

**ಮಿಥುನ:** ಇಂದು ನೀವು ಹೆಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು. ಇಂದು ನಿಮ್ಮ ಪ್ರೀತಿಯ ಜೀವನದಲ್ಲಿ ಅದ್ಭುತ ದಿನವಾಗಿದೆ. ನಿಮ್ಮ ಪ್ರಖರ ವೀಕ್ಷಣೆ ನಿಮ್ಮನ್ನು ಇತರರಿಗಿಂತ ಮುಂದಿರಲು ಸಹಾಯ ಮಾಡುತ್ತದೆ.

**ಕರ್ಕಾಟಕ:** ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಇಂದು ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಡಿಯುವ ಸಧ್ಯತೆ ಇದೆ. ವಿಶೇಷವಾಗಿ ನಿಮ್ಮ ಹಣದಚೀಲವನ್ನು ಎಚ್ಚರಿಕೆಯಿಂದಿಡಿ. ಸಂಜೆ ಸ್ನೇಹಿತರೊಡನೆ ಹೋಗಿ ಇದು ತುಂಬ ಒಳ್ಳೆಯದನ್ನು ಮಾಡುತ್ತದೆ.

**ಸಿಂಹ:** ಇಂದು ಶಾಂತವಾಗಿ ಒತ್ತಡ ಮುಕ್ತವಾಗಿರಿ. ಯಾರಾದರೂ ನಿಮ್ಮ ನೆರೆಹೊರೆಯವರು ಇಂದು ನಿಮ್ಮ ಹತ್ತಿರ ಹಣ ಸಾಲ ಕೇಳಲು ಬರಬಹುದು, ಅವರಿಗೆ ಸಾಲ ಕೊಡುವುದಕ್ಕಿಂತ ಮುಂಚೆ ಅವರ ನಂಬಿಕೆಯನ್ನು ಅಗತ್ಯವಾಗಿ ಪರೀಕ್ಷಿಸಿ, ಇಲ್ಲದಿದ್ದರೆ ಹಣದ ನಷ್ಟವಾಗುವ ಸಾಧ್ಯತೆ ಇದೆ.

**ಕನ್ಯಾ:** ಪ್ರಕೃತಿಯು ನಿಮ್ಮಲ್ಲಿ ಗಮನಾರ್ಹ ವಿಶ್ವಾಸ ಮತ್ತು ಬುದ್ಧಿವಂತಿಕೆಯನ್ನಿರಿಸಿದೆ ಅದನ್ನು ಸಾಧ್ಯವಾದಷ್ಟೂ ಬಳಸಿಕೊಳ್ಳಿ. ನೀವು ಆಲ್ಕೊಹಾಲ್ಯುಕ್ತ ಮದ್ಯವನ್ನು ಸೇವಿಸಬಾರದು, ಮಾದಕತೆಯ ಸಂದರ್ಭದಲ್ಲಿ ನೀವು ಯಾವುದೇ ಬೆಲೆಬಾಳುವ ವಸ್ತುಗಳನ್ನು ಕಳೆದುಕೊಳ್ಳಬಹುದು.

**ತುಲಾ:** ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ. ನೀವು ಭಾವಿಸಿದ್ದಕ್ಕಿಂತ ಹೆಚ್ಚಾಗಿ ನಿಮ್ಮ ಸಹೋದರರು ನಿಮ್ಮ ಅಗತ್ಯಗಳಿಗೆ ಬೆಂಬಲ ನೀಡುತ್ತಾರೆ.

**ವೃಶ್ಚಿಕ:** ನಿಮ್ಮ ಅಸಭ್ಯ ವರ್ತನೆ ನಿಮ್ಮ ಹೆಂಡತಿಯ ಮನಸ್ಸನ್ನು ಹಾಳು ಮಾಡುತ್ತದೆ. ನೀವು ಯಾರನ್ನಾದರೂ ಅಗೌರವದಿಂದ ಕಾಣುವುದು ಹಾಗೂ ಸಂಬಂಧವನ್ನು ಲಘುವಾಗಿ ತೆಗೆದುಕೊಳ್ಳುವುದು ಅಪಾಯಕ್ಕೆ ಅದನ್ನು ತೀವ್ರವಾಗಿ ಘಾಸಿಗೊಳಿಸಬಹುದು ಎಂದು ಅರ್ಥ ಮಾಡಿಕೊಳ್ಳಬೇಕು.

**ಧನಸ್ಸು:** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ.

**ಮಕರ:** ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇತರರ ಮೇಲೆ ಪ್ರಭಾವ ಬೀರಲು ತುಂಬಾ ವೆಚ್ಚ ಮಾಡಬೇಡಿ. ಇತರರ ವ್ಯವಹಾರಗಳಲ್ಲಿ ನಿಮ್ಮ ಮೂಗುತೂರಿಸುವಿಕೆಯನ್ನು ಇಂದು ತಡೆಯಬೇಕು. ಪ್ರೇಮಪ್ರಯಾಣ ಮಧುರವಾಗಿದ್ದರೂ ಅಲ್ಪಾವಧಿಯದ್ದಾಗಿರುತ್ತದೆ. ನೀವು ಇಂದು ಸಂಬಂಧಗಳ ಮಹತ್ವವನ್ನು ಅನುಭವಿಸಬಹುದು.

**ಕುಂಭ:** ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಆರ್ಥಿಕ ಭಾಗವು ಬಲಗೊಳ್ಳುವ ಪೂರ್ಣ ಸಾಧ್ಯತೆ ಇದೆ.ನೀವು ಯಾವುದೇ ವ್ಯಕ್ತಿಗೆ ಸಾಲ ನೀಡಿದ್ದರೆ, ಇಂದು ನೀವು ಆ ಹಣವನ್ನು ಮರಳಿ ಪಡೆಯುವ ನಿರೀಕ್ಷೆಯಿದೆ ಇತರರಿಗೆ ಪ್ರತಿಫಲಗಳು ತರುವ ನಿಮ್ಮ ಸಾಮರ್ಥ್ಯ ಪ್ರತಿಫಲ ತರುತ್ತದೆ.

**ಮೀನ:** ನೀವು ಪರಿಸ್ಥಿತಿಯ ನಿಯಂತ್ರಣ ಹೊಂದುತ್ತಿದ್ದಂತೆ ನಿಮ್ಮ ಆತಂಕ ಕಣ್ಮರೆಯಾಗುತ್ತದೆ. ಇದು ಧೈರ್ಯದ ಮೊದಲ ಸ್ಪರ್ಶದಲ್ಲಿ ಕುಸಿದುಹೋಗುವ ಸಾಬೂನಿನ ಗುಳ್ಳೆಯಷ್ಟೇ ಗಟ್ಟಿಯೆಂದು ನೀವು ಅರ್ಥ ಮಾಡಿಕೊಳ್ಳುತ್ತೀರಿ. ಜೀವನದ ಕೆಟ್ಟ ಕಾಲದಲ್ಲಿ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ.

## 2028 ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವುದು ಖಚಿತ: ಡಿಕೆ ಶಿವಕುಮಾರ್ ಮತ್ತೆ ಸಿ ಎಂ ಆಗುವುದು ನಿಶ್ಚಿತ; ತಂಗಡಗಿ

**• ಉದಯವಾಹಿನಿ, ಕೊಪ್ಪಳ:**

2028ಕ್ಕೂ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬರಲಿದ್ದು, ಡಿ.ಕೆ ಶಿವಕುಮಾರ್ ಅವರೇ ಮುಖ್ಯಮಂತ್ರಿಯಾಗಿರಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ಎಸ್ ತಂಗಡಗಿ ಹೇಳಿದ್ದಾರೆ. ಕೊಪ್ಪಳದಲ್ಲಿ ಮಾತನಾಡಿದ ಅವರು, 2028 ಕ್ಕೆ ಪಕ್ಷದ ಹಿರಿಯ ನಾಯಕರು ಮುಖ್ಯಮಂತ್ರಿ ಹುದ್ದೆಯ ಆಕಾಂಕ್ಷಿಗಳಾಗಿದ್ದೇವೆ ಎನ್ನುತ್ತಿದ್ದರಲ್ಲ ಎಂಬ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ತಂಗಡಗಿ, ಸಹಜವಾಗಿ ಹಿರಿಯರು ತಮ್ಮ ಭಾವನೆ ವ್ಯಕ್ತಪಡಿಸುವುದು ತಪ್ಪಲ್ಲ. ಆದರೆ 2028 ಕ್ಕೂ ಕೂಡ ಶಿವಕುಮಾರ್ ಅವರೇ ಮುಖ್ಯಮಂತ್ರಿ ಆಗುವುದು ನಿಶ್ಚಿತ ಎಂದರು. ಜಿಲ್ಲೆಯಲ್ಲಿ ಶಾಸಕ ರಾಘವೇಂದ್ರ ಹಿಟ್ನಾಳ್ ಅವರು ಮಂತ್ರಿ ಪದವಿಯ ಆಕಾಂಕ್ಷಿಯಾಗಿದ್ದರು.


ಉದಯವಾಹಿನಿ ಚಿತ್ರ

ಮುಂದಿನ ದಿನಗಳಲ್ಲಿ ಹಿಟ್ನಾಳ್ ಅವರು ಸಚಿವರಾಗುತ್ತಾರೆ ಎಂಬ ವಿಶ್ವಾಸವಿದೆ. ನಮ್ಮಲ್ಲಿ ಯಾವುದೇ ಮುನಿಸುಗಳಿಲ್ಲ. ಜಿಲ್ಲೆಯ ಶಾಸಕರೆಲ್ಲ ಒಟ್ಟಾಗಿದ್ದೇವೆ ಎಂದಿದ್ದಾರೆ. ಸಾರ್ವಜನಿಕ ಪ್ರದೇಶಗಳಲ್ಲಿ ಆರ್‌ಎಸ್‌ಎಸ್ ಚಟುವಟಿಕೆಗೆ ಕಡಿವಾಣ ಹಾಕಲು ಸರ್ಕಾರ ಮುಂದಾಗಿದೆಯಲ್ಲ ಎಂಬ ಪ್ರಶ್ನೆಗೆ ಸಂಘಟನೆಗಳು ಸಭೆ, ಕಾರ್ಯಕ್ರಮ ನಡೆಸಲು ಅನುಮತಿ ಕಡ್ಡಾಯ ಎಂದು ಹೇಳಿದ್ದೇವೆ.

ಇದಕ್ಕೆ ಆರ್‌ಎಸ್‌ಎಸ್ ಹೊರತಾಗಿಲ್ಲ. ಈ ಸಂಘಟನೆಯವರು ಮೊದಲ ನೋಂದಣಿ ಬಗ್ಗೆ ಮಾಹಿತಿ ಕೊಡಲಿ. ಬಿಜೆಪಿಗರು ತಾಕತ್ತಿದ್ದರೆ ರಾಷ್ಟ್ರಧ್ವಜವನ್ನು ಆರ್‌ಎಸ್ ಎಸ್ ಕೇಂದ್ರ ಕಚೇರಿ ಮೇಲೆ ಹಾರಿಸಲಿ. ಬಿಜೆಪಿಯವರಿಂದ ದೇಶ ಪ್ರೇಮದ ಪಾಠ ಕಲಿಯಬೇಕಿಲ್ಲ ಎಂದು ವಾಗ್ದಾಳಿ ನಡೆಸಿದರು.

## ಮಂತ್ರಿ ರೇಸ್‌ನಲ್ಲಿ ಮೂವರು ಶಾಸಕಿಯರಿದ್ದು, ಖಾಲಿ ಸ್ಥಾನ ಭರ್ತಿ: ಸತೀಶ ಜಾರಕಿಹೊಳಿ

### ಮೂವರು ಮಹಿಳಾ ಶಾಸಕಿಯರಲ್ಲಿ ಯಾರಿಗೆ ಸಚಿವ ಸ್ಥಾನ ನೀಡುತ್ತದೆಯೋ ಅವರ ಪರವಾಗಿ ನಾವು ನಿಲ್ಲುತ್ತೇವೆ

**• ಉದಯವಾಹಿನಿ, ಬೆಳಗಾವಿ:**

ಖಾಲಿ ಇರುವ ಒಂದು ಮಹಿಳಾ ಸಚಿವ ಸ್ಥಾನಕ್ಕೆ ಶಾಸಕಿ ಲಕ್ಷ್ಮಿ ಹೆಬ್ಬಾಳ್ಕರ್, ಉಮಾಶ್ರೀ, ಗಾಯತ್ರಿ ಶಾಂತೇಗೌಡ ರೇಸ್‌ನಲ್ಲಿದ್ದಾರೆ. ಮೂವರಲ್ಲಿ ಯಾರಿಗೆ ಕೊಡುತ್ತಾರೆ, ನೋಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು. ಸ್ವಾತಂತ್ರ್ಯೋತ್ಸವದ ಧ್ವಜಾರೋಹಣ ನೆರವೇರಿಸಿದ ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮಹಿಳೆಯರು ಬರೋವರೆಗೆ ಮುಖ್ಯಮಂತ್ರಿಗಳು ನಿರ್ವಹಣೆ ಮಾಡುತ್ತಾರೆ. ಯಾರನ್ನು ಮಾಡಬೇಕು ಎಂಬ ಗೊಂದಲ ಇರುವುದರಿಂದ ವಿಳಂಬ ಆಗುತ್ತಿದೆ. ಎಲ್ಲರೂ ಸಮರ್ಥರಿದ್ದಾರೆ. ಯಾರಿಗೆ ನೀಡಬೇಕು ಎನ್ನುವ ಪ್ರಶ್ನೆ ಇದೆ. ಪಕ್ಷ ಮೂವರಲ್ಲಿ ಯಾರನ್ನು ಮಾಡುತ್ತದೆಯೋ, ಅವರ ಪರವಾಗಿ ನಾವು ನಿಲ್ಲುತ್ತೇವೆ ಎಂದರು.

> 1 : ಯಾರಿಗೆ ನೀಡಬೇಕು ಎನ್ನುವ ಪ್ರಶ್ನೆ
> 2 : ಸಿದ್ದರಾಮಯ್ಯ ಹಠ ಹಿಡಿದಿದ್ದರಾ
> 3 : ಶಾಸಕಿಯೊಬ್ಬರಿಗೆ ಸಚಿವ ಸ್ಥಾನ

ಖಾತೆ ಹಂಚಿಕೆ ವಿಚಾರದಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ ಹಠ ಹಿಡಿದಿದ್ದರಾ ಎಂಬ ಮಾಧ್ಯಮಗಳ ಪ್ರಶ್ನೆಗೆ ಯಾರಿಗೆ ಮಂತ್ರಿ ಮಾಡಬೇಕು ಎನ್ನುವುದರ ಬಗ್ಗೆ ಚರ್ಚೆ ಆಗುತ್ತಿದೆ.


ಉದಯವಾಹಿನಿ ಚಿತ್ರ

> ಪ್ರತಿ 15 ಕಿ.ಮೀ ಅಂತರದಲ್ಲಿ ಒಂದು ಸಕ್ಕರೆ ಕಾರ್ಖಾನೆ ಇರಬೇಕು ಎಂಬ ನಿಯಮವನ್ನು ಬದಲಿಸಿ, 25 ಕಿ.ಮೀ.ಗೆ ಒಂದು ಸಕ್ಕರೆ ಕಾರ್ಖಾನೆ ಸ್ಥಾಪಿಸಬೇಕು ಎಂಬ ಬಗ್ಗೆ ಮೂರು ವರ್ಷಗಳ ಹಿಂದೆ ನಾವು ಸರ್ಕಾರಕ್ಕೆ ತಿಳಿಸಿದ್ದೇವೆ. ಆ ವಿಚಾರ ಕ್ಯಾಬಿನೆಟ್ ನಲ್ಲಿ ಬರಬೇಕು ಎಂದು ತಿಳಿಸಿದರು. -ಸಚಿವ ಸತೀಶ ಜಾರಕಿಹೊಳಿ

> ರಾಜಕೀಯದಲ್ಲಿ ಯಾರೂ ಶಾಶ್ವತ ವೈರಿಗಳು ಇಲ್ಲ, ಮಿತ್ರರೂ ಇಲ್ಲ. ಒಂದೇ ಪಾರ್ಟಿಯಲ್ಲಿ ಇದ್ದ ಮೇಲೆ ಜಗಳ ಮಾಡೋಕೆ ಆಗುತ್ತದೆಯೇ? ಪಕ್ಷವನ್ನು ಬಲವರ್ಧನೆ ಮಾಡುವ ನಿಟ್ಟಿನಲ್ಲಿ ಕೂಡಿಕೊಂಡು ಹೋಗುವಂತೆ ವರಿಷ್ಠರು ತಿಳಿಸಿದ್ದಾರೆ ಎಂದು ಹೇಳಿದರು. -ಸಚಿವ ಸತೀಶ ಜಾರಕಿಹೊಳಿ

ಅಧಿವೇಶನ ಮುಗಿದ ಮೇಲೆ ಶಾಸಕಿಯೊಬ್ಬರಿಗೆ ಸಚಿವ ಸ್ಥಾನ ಕೊಡುತ್ತಾರೆ ಎಂದು ಸಮರ್ಥಿಸಿಕೊಂಡರು.

ಸಚಿವ ಜಮೀರ ಅಹಮದ್ ಧ್ವಜಾರೋಹಣಕ್ಕೆ ಹಿಂದೇಟು ಹಾಕಿರುವ ವಿಚಾರಕ್ಕೆ ಪ್ರತಿಕ್ರಿಯಿಸಿ, ಬಿಬಿಎಂಪಿ ಚುನಾವಣೆ ವಿಚಾರದ ಬಗ್ಗೆ ಅವರು ಪತ್ರದಲ್ಲಿ ಬರೆದಿದ್ದಾರೆ. ಈ ಬಗ್ಗೆ ಅವರನ್ನೇ ಕೇಳಬೇಕು ಎಂದ ಅವರು, ಬಿಜೆಪಿಯವರ ಆರೋಪದ ವಿಚಾರಕ್ಕೆ ತಮ್ಮ ಕಚೇರಿಯಲ್ಲಿಯೇ ಬಿಜೆಪಿಯವರು ಧ್ವಜ ಹಾರಿಸುವುದಿಲ್ಲ. ನಮ್ಮ ಮೇಲೆ ಆರೋಪ ಮಾಡಲು ಅವರಿಗೆ ಯಾವುದೇ ನೈತಿಕತೆ ಇಲ್ಲ. 70 ವರ್ಷಗಳಲ್ಲಿ ಇಂತಹ ಸಾಕಷ್ಟು ಘಟನೆಗಳು ಆಗಿವೆ. ಇದರಲ್ಲಿ ರಾಜಕೀಯ ಮಾಡುವುದು ಬೇಡ ಎಂದು ಅಭಿಪ್ರಾಯಪಟ್ಟರು.

### ಬರ ವೀಕ್ಷಣೆ

> ನಾಳೆ ಯರಗಟ್ಟಿ, ಸವದತ್ತಿ, ರಾಮದುರ್ಗ ತಾಲೂಕುಗಳಲ್ಲಿ ಬರ ವೀಕ್ಷಣೆ ಮಾಡುತ್ತೇನೆ. ಮೂರು ತಾಲೂಕಿನಲ್ಲಿ ಮಾತ್ರ ಸಮಸ್ಯೆ ಇದೆ. ನಾವು ವರದಿ ಕೊಟ್ಟ ಮೇಲೆ, ಅದು ಕೇಂದ್ರಕ್ಕೆ ಹೋಗಬೇಕು. ಅವರು ಬರ ಘೋಷಣೆ ಮಾಡಬೇಕು. ಪ್ರಾಥಮಿಕ ಮಾಹಿತಿ ಪ್ರಕಾರ 29 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಉದ್ದ, ಹೆಸರು ಬೆಳೆ ಹಾನಿ ಆಗಿದೆ ಎಂದರು.

ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ ಎಂದು ಠರಾವ್ ಪಾಸ್ ಮಾಡಲು ಪಾಲಿಕೆ ಹಿಂದೇಟು ಹಾಕುತ್ತಿರುವುದಕ್ಕೆ ಪ್ರತಿಕ್ರಿಯಿಸಿ, ಅದಕ್ಕೆ ಸಂಬಂಧಿಸಿದ ಮಂತ್ರಿಗಳಿದ್ದಾರೆ. ಈಗಾಗಲೇ ಅವರು ಮತ್ತು ಸರ್ಕಾರದ ಗಮನಕ್ಕೆ ಬಂದಿದೆ. ಠರಾವ್ ಪಾಸ್ ಮಾಡಬೇಕು ಎನ್ನುವುದು ಬಹಳ ದಿನಗಳ ಬೇಡಿಕೆ ಇದೆ. ಆದರೆ, ಅವರು ಅದನ್ನು ಮಾಡುತ್ತಿಲ್ಲ. ಈ ಹಿಂದೆ ನಾವು, ಡಿಸಿ ಅವರು ಪಾಲಿಕೆ ಜೊತೆಗೆ ಸಭೆ ಮಾಡಿ, ಅನೇಕ ಬಾರಿ ಸಾಕಷ್ಟು ಸಲಹೆ ಕೊಟ್ಟಿದ್ದೇವೆ. ಮೂರು ತಿಂಗಳ ಸಭೆ ಆಗಿಲ್ಲ ಉದ್ದೇಶಪೂರ್ವಕವಾಗಿ ಮಾಡುತ್ತಿಲ್ಲ. ಮಾಧ್ಯಮಗಳು ಬೆಳಕು ಚೆಲ್ಲಬೇಕು ಎಂದರು.

## ಭಾರತ ಅತ್ಮನಿರ್ಭರ ರಾಷ್ಟ್ರವಾಗಿ ರೂಪುಗೊಳ್ಳಲು ಪ್ರತಿ ಪ್ರಜೆಯ ಶ್ರಮ ಅಗತ್ಯ: ಡಾ.ವಿಜಯಲಕ್ಷ್ಮೀ ಪಿ. ವೈದ್ಯಾಧಿಕಾರಿ,

**• ಉದಯವಾಹಿನಿ, ಚಿತ್ರದುರ್ಗ**

ನಮ್ಮ ಭಾರತವು ಅಭಿವೃದ್ಧಿ ಹೊಂದಿದ, ಆರೋಗ್ಯವಂತ, ಸ್ವಚ್ಛ, ಸದೃಢ ಮತ್ತು ಆತ್ಮನಿರ್ಭರ ರಾಷ್ಟ್ರವಾಗಿ ರೂಪುಗೊಳ್ಳಲು ನಾವೆಲ್ಲರೂ ನಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕಿದೆ ಎಂದು ಡಾ.ವಿಜಯಲಕ್ಷ್ಮೀ ಪಿ ಅಭಿಪ್ರಾಯ ಪಟ್ಟಿದ್ದಾರೆ.

80ನೇ ಸ್ವಾತಂತ್ರ್ಯ ದಿನೋತ್ಸವ ಸಂಧರ್ಭದಲ್ಲಿ ಚಿತ್ರದುರ್ಗ ತಾಲ್ಲೂಕು ಜೆ ಎನ್ ಕೋಟೆ ಗ್ರಾಮದ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ ಕೇಂದ್ರದ ವತಿಯಿಂದ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡುತ್ತಾ ಇಂದಿನ ಯುವಜನತೆ ಮಾದಕ ವ್ಯಸನಗಳಿಂದ ದೂರವಿದ್ದು, ಉತ್ತಮ ಜೀವನಶೈಲಿಯನ್ನು ಅಳವಡಿಸಿಕೊಂಡು ದೇಶದ ಪ್ರಗತಿಗೆ ತಮ್ಮ ಕೊಡುಗೆ ನೀಡಬೇಕು. ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದರ ಜೊತೆಗೆ, ಕುಟುಂಬ ಮತ್ತು ಸಮಾಜದ ಆರೋಗ್ಯದ ಬಗ್ಗೆಯೂ ಕಾಳಜಿ ವಹಿಸಬೇಕು. ''ನನ್ನ ಆರೋಗ್ಯ ನನ್ನ ಜವಾಬ್ದಾರಿ, ನನ್ನ ದೇಶ ನನ್ನ ಹೆಮ್ಮೆ'' ಎಂಬ ಸಂಕಲ್ಪದೊಂದಿಗೆ ಈ ಸ್ವಾತಂತ್ರ್ಯ ದಿನವನ್ನು ಅರ್ಥಪೂರ್ಣವಾಗಿ ಆಚರಿಸೋಣ ಆಯುಷ್ ವೈದ್ಯಕೀಯ ಪದ್ಧತಿಗಳು ನಮ್ಮ ದೇಶದ ಪಾರಂಪರಿಕ ಜ್ಞಾನ ಮತ್ತು ಆರೋಗ್ಯ ಪರಂಪರೆಯ ಪ್ರಮುಖ ಭಾಗವಾಗಿವೆ. ಯೋಗ, ಆಯುರ್ವೇದ, ನೈಸರ್ಗಿಕ ಜೀವನಶೈಲಿ, ಸಮತೋಲಿತ ಆಹಾರ ಮತ್ತು ನಿಯಮಿತ ವ್ಯಾಯಾಮದ ಮೂಲಕ ರೋಗ ತಡೆಗಟ್ಟುವ ಆರೋಗ್ಯಕರ ಸಮಾಜ ನಿರ್ಮಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ.ಸ್ವಾತಂತ್ರ್ಯವೆಂದರೆ ಕೇವಲ ವಿದೇಶಿ ಆಡಳಿತದಿಂದ ಮುಕ್ತವಾಗಿರುವುದಲ್ಲ, ಪ್ರತಿಯೊಬ್ಬ ನಾಗರಿಕನಿಗೂ ಉತ್ತಮ ಆರೋಗ್ಯ, ಶಿಕ್ಷಣ, ಸ್ವಚ್ಛ ಪರಿಸರ, ಸಮಾನ ಅವಕಾಶ ಮತ್ತು ಗೌರವಯುತ ಜೀವನ ದೊರಕುವಂತಾಗಬೇಕು ಎಂದು ಅವರು ತಮ್ಮ ಭಾಷಣದಲ್ಲಿ ಆಶಿಸಿದರು.


ಉದಯವಾಹಿನಿ ಚಿತ್ರ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಗ್ರಾಮದ ಸರ್ಕಾರಿ ಪಶು ಚಿಕಿತ್ಸಾಲಯದ ಹಿರಿಯ ಪಶು ಚಿಕಿತ್ಸಕಿ ಶ್ರೀಮತಿ ಅನ್ನಪೂರ್ಣಮ್ಮ ಮಾತನಾಡಿ ಇಂದು ನಮ್ಮ ದೇಶದ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಹೆಮ್ಮೆಯಿಂದ ಮತ್ತು ಸಂಭ್ರಮದಿಂದ ಆಚರಿಸುತ್ತಿದ್ದೇವೆ. ಈ ಪವಿತ್ರ ಸಂದರ್ಭದಲ್ಲಿ

ಭಾರತದ ಸ್ವಾತಂತ್ರ್ಯಕ್ಕಾಗಿ ತಮ್ಮ ಜೀವನವನ್ನೇ ತ್ಯಾಗ ಮಾಡಿದ ಮಹಾನ್ ಸ್ವಾತಂತ್ರ್ಯ ಹೋರಾಟಗಾರರನ್ನು ಈ ಸಂದರ್ಭದಲ್ಲಿ ಗೌರವಪೂರ್ವಕವಾಗಿ ಸ್ಮರಿಸೋಣ. ಅವರ ತ್ಯಾಗ, ದೇಶಪ್ರೇಮ ಮತ್ತು ಆದರ್ಶಗಳು ನಮ್ಮೆಲ್ಲರಿಗೂ ಸದಾ ಸ್ಫೂರ್ತಿಯಾಗಲಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಯೋಗ ಚಿಕಿತ್ಸಕ ರವಿ ಕೆ.ಅಂಬೇಕರ್, ಗ್ರಾಮದ ಹಿರಿಯ ಮುಖಂಡರಾದ ಚಿದಾನಂದಸ್ವಾಮಿ, ಕರಿಬಸವಪ್ಪ, ಪ್ರಸನ್ನಕುಮಾರ್, ರಾಘವೇಂದ್ರ, ನೇತ್ರಾವತಿ, ಮಂಜುಳಾದೇವಿ ಹಾಗೂ ಇನ್ನಿತರರು ಭಾಗವಹಿಸಿದ್ದರು.

## ಟಿಪ್ಪು ಸುಲ್ತಾನ್ ವೃತ್ತದಲ್ಲಿ 80ನೇ ಸ್ವಾತಂತ್ರ್ಯೋತ್ಸವ ಆಚರಣೆ


ಉದಯವಾಹಿನಿ ಚಿತ್ರ

**• ಉದಯವಾಹಿನಿ, ಕೆಂಭಾವಿ:**

ಪಟ್ಟಣದ ಟಿಪ್ಪು ಸುಲ್ತಾನ್ ವೃತ್ತದಲ್ಲಿ 80ನೇ ಸ್ವಾತಂತ್ರ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಸಂಘದ ಅಧ್ಯಕ್ಷರಾದ ಶ್ರೀ ಶಫೀಕ್ ದಫೆದಾರ್ ಅವರು ಧ್ವಜಾರೋಹಣ ನೆರವೇರಿಸಿ ಗೌರವ ವಂದನೆ ಸಲ್ಲಿಸಿದರು.ಬಳಿಕ ಮಾತನಾಡಿದ ಅವರು, ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ-ಬಲಿದಾನಗಳನ್ನು ಸ್ಮರಿಸುತ್ತಾ, ದೇಶದ ಏಕತೆ ಮತ್ತು ಸಮಗ್ರತೆಯನ್ನು ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ ಎಂದರು.ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ಆರೀಫ್ ಹುಸೇನ್ ಖಾಜಿ, ಮಹಿಪಾಲ್ ರೆಡ್ಡಿ ದಿಗ್ಗಾವಿ, ರವಿಶಂಕರ್ ಸೊನ್ನದ, ಆದಿತ್ಯ ಗೌಡ ಪಾಟೀಲ್, ಬಿ.ಝುಡ್. ನಾಲತವಾಡ, ರಾಘವೇಂದ್ರ ದೇಶಪಾಂಡೆ, ಸೋಫಿ ನಾಸಿ, ಬಂದೇನವಾಜ್ ನಾಲತವಾಡ, ಪವನ್ ಕುಲ್ಕರ್ಣಿ, ನಯುಮ್ ಖಾಜಿ, ಅಲ್ಲಾಭಕ್ಷ್ ಹುಳಬುತ್ತಿ, ಬಷೀರ್ ನಾಸಿ, ಬಾಬಾ ತಾಳಿಕೋಟಿ, ಜಿಲಾನಿ ನಾಸಿ ಸೇರಿದಂತೆ ಹಲವು ಪ್ರಮುಖರು ಉಪಸ್ಥಿತರಿದ್ದರು.

## 80ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ

**• ಉದಯವಾಹಿನಿ,ಚಿಂಚೋಳಿ;**


ಉದಯವಾಹಿನಿ ಚಿತ್ರ

ತಾಲ್ಲೂಕಿನ ಶಾಧಿಪೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾಮಕ್ಕಳಿಗೆ 80ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ವತಿಯಿಂದ ನೋಟ್‌ಬುಕ್ ಪೆನ್ನು ಸಿಹಿತಿಂಡಿ ವಿತರಣೆ ಮಾಡಲಾಯಿತು.ಶಾದಿಪೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಶ್ರೀನಂದರೆಡ್ಡಿ,ಉಪಾಧ್ಯಕ್ಷ ಗೋಪಾಲ,ಕಾರ್ಯದರ್ಶಿ ಸಂಗಮೇಶ ಕಲ್ವಾ,ನಿರ್ಧೇಶಕರುರಾಮುಲು ದೊರಟ್ಟಿ, ರಾಮುಲು,ಶಂಕರ,ಚಿನ್ನಯ್ಯ ಕಾವಲಿ,ಲೀಲಾಬಾಯಿ,ಸೇವಂತಿಬಾಯಿ,ಝುರಣಮ್ಮ, ಮಧುಕರರಾವ,ಲಕ್ಷ್ಮಿಬಾಯಿ,ಸಾವಿತ್ರಿಬಾಯಿ,ಮಾಜಿ ಕಾರ್ಯದರ್ಶಿ ವೆಂಕಟೇಶ ಕಲ್ವಾ,ಹಾಗೂ ಎಸ್ಡಿಎಂಸಿ ಅಧ್ಯಕ್ಷ ಅಂಬರೇಶ ವಾಲಿಕರ,ಶಾಲೆಯ ಮುಖ್ಯಗುರು ಜ್ಯೋತಿ,ಸೇರಿದಂತೆ ಸದಸ್ಯರು ಗ್ರಾಮಸ್ಥರು ಶಾಲಾಮಕ್ಕಳು ಇದ್ದರು.

## ಭಾರತ ಜೋಡೊ ಯುವ ಸಂಘಗಳಿಗೆ ಅರ್ಜಿ ಅಹ್ವಾನ

**• ಉದಯವಾಹಿನಿ ಚಿಂಚೋಳಿ;**


ಉದಯವಾಹಿನಿ ಚಿತ್ರ

ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿ ಭಾರತ ಜೋಡೊ ಯುವ ಸಂಘಗಳು ಸ್ಥಾಪಿಸಿ ನೋಂದಣಿ ಮಾಡಿಸಲು ಅರ್ಜಿ ಅಹ್ವಾನಿಸಲಾಗಿದೆ ಆಸಕ್ತ ಯುವಕರು,ಯುವತಿಯರು ಅನ್ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು ಎಂದು ಪುಸಸಭೆ ಮುಖ್ಯಾಧಿಕಾರಿ ಕಾಶಿನಾಥ ಧನ್ನಿ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು,ಪುರಸಭೆ ವ್ಯಾಪ್ತಿಯಲ್ಲಿ ಸರಾಸರಿ 6000ಜನಸಂಖ್ಯೆ ಒಂದರಂತೆ ಸರಾಸರಿ ನಾಲ್ಕು ಯುವ ಸಂಘಗಳನ್ನು ಸ್ಥಾಪಿಸಲು ಸರ್ಕಾರ ಆದೇಶ ಹೊರಡಿಸಿದೆ,ಅದರಂತೆ 16ವರ್ಷದಿಂದ 35ವರ್ಷದೊಳಗಿನ ಸ್ಥಳಿಯ ನಿವಾಸಿಗಳು ಸಂಘದ ಸದಸ್ಯರಾಗಲು ಅರ್ಹರಾಗಿರುತ್ತಾರೆ.

ಬಿಜೆವೈಎಸ್ ಪೋರ್ಟಲ್ ಮೊಬೈಲ್ ಆಪ್,ಕರ್ನಾಟಕ ಒನ್ ಹಾಗೂ ನಾಗರಿಕ ಸೇವಾ ಕೇಂದ್ರಗಳ ಮೂಲಕ ಆನ್ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು,ನೋಂದಣಿಗೆ ಆಧಾರ ಕಾರ್ಡ್ ಕಡ್ಡಾಯ,ಪ್ರತಿ ಸದಸ್ಯರಿಗೆ 10ರೂ.ನೋಂದಣಿ ಶುಲ್ಕ ನಿಗಧಿಪಡಿಸಲಾಗಿದೆ ಎಂದು ತಿಳಿಸಿದ್ದಾರೆ.

## ಗದಗ ಡಿಸಿ ಕಾರು ಜಪ್ತಿಗೆ ಕೋರ್ಟ್ ಆದೇಶ

**• ಉದಯವಾಹಿನಿ,ಗದಗ:**

ಅನ್ನದಾತರು ಅಲ್ವಾ, ಸರಕಾರ ಸ್ವಾಧೀನಪಡಿಸಿಕೊಂಡ ಭೂಮಿಗೆ ಪರಿಹಾರ ನೀಡದಿದ್ದರೆ, ಏನು ಮಾಡುತ್ತಾರೆ? ಎಂದು ಕೊಂಡರು ಅನಿಸುತ್ತೆ ಗದಗ ಜಿಲ್ಲಾಧಿಕಾರಿಗಳು! ಆದ್ರೆ, ಅದೇ ರೈತರು, ನ್ಯಾಯಾಂಗದ ಮೂಲಕ ಜಿಲ್ಲೆಯ ಪ್ರಥಮ ಪ್ರಜೆಗೆ ಸರಿಯಾದ ಪಾಠ ಮಾಡಿದ್ದಾರೆ. ಗದಗ ಜಿಲ್ಲೆಯ ಮುಂಡರಗಿ ತಾಲ್ಲೂಕಿನ ಭಾಗದಲ್ಲಿ, ಬಿಡನಾಳ, ಶೀರನಹಳ್ಳಿ, ಬರದೂರು, ಮೇವುಂಡಿ ಸೇರಿದಂತೆ 10ಕ್ಕೂ ಅಧಿಕ ಗ್ರಾಮಗಳ ರೈತರು ಸಿಂಗಟಾಲೂರು ಏತ ನೀರಾವರಿ ಯೋಜನೆಯ ಕಾಲುವೆ ನಿರ್ಮಾಣಕ್ಕಾಗಿ ಸುಮಾರು 300 ಎಕರೆ ರೈತರ ಜಮೀನನ್ನು ಸರ್ಕಾರ ವಶಪಡಿಸಿಕೊಂಡಿತ್ತು.

ಆದರೆ, ಈ ಯೋಜನೆಗಾಗಿ ಜಮೀನು ಕಳೆದುಕೊಂಡು ಸುಮಾರು 20 ವರ್ಷಗಳು ಕಳೆದರೂ ಜಿಲ್ಲಾಡಳಿತ ಕರ್ನಾಟಕ ನೀರಾವರಿ ನಿಗಮದ ಅಧಿಕಾರಿಗಳು ರೈತರಿಗೆ ನೀಡಬೇಕಾದ ಸೂಕ್ತ ಪರಿಹಾರದ ಹಣವನ್ನು ಬಿಡುಗಡೆ ಮಾಡದೆ ವಿಳಂಬ ಧೋರಣೆ ಅನುಸರಿಸಿದ್ದರು.

ಈ ವಿಳಂಬದಿಂದ ಬೇಸತ್ತ ಗದಿಗೆಪ್ಪ ಎಂಬ ರೈತರು, ತಮಗೆ ನ್ಯಾಯ ಸಿಗಬೇಕೆಂದು 2015 ರಲ್ಲಿಯೇ ಗದಗ ಜಿಲ್ಲಾ ನ್ಯಾಯಾಲಯದ ಮೆಟ್ಟಿಲೇರಿದ್ದರು. ಇನ್ನು ಆರಂಭದಲ್ಲಿ ಪ್ರತಿ ಎಕರೆಗೆ 50 ಸಾವಿರ ರೂಪಾಯಿ ನೀಡುವಂತೆ ಘೋಷಣೆ ಮಾಡಲಾಗಿತ್ತು. ಆದ್ರೆ, ಪರಿಹಾರ ಮೊತ್ತ ಹೆಚ್ಚಿಸಬೇಕು ಎಂದು ರೈತರು 2017ರಲ್ಲಿ ಬೇಡಿಕೆ ಸಲ್ಲಿಸಿದ್ದರು.

> ಪರಿಹಾರ ನೀಡದಿದ್ದರೆ, ಏನು ಮಾಡುತ್ತಾರೆ?

ಹಲವು ವರ್ಷಗಳ ಕಾಲ ನಡೆದ ಕಾನೂನು ಪ್ರಕ್ರಿಯೆಯ ಬಳಿಕ 2024ರಲ್ಲಿ ಎಕರೆಗೆ 40 ಲಕ್ಷ ರೂಪಾಯಿ ಪರಿಹಾರ ನೀಡುವಂತೆ ಕೋರ್ಟ್ ಆದೇಶ ಹೊರಡಿಸಿತ್ತು. ಆದ್ರೆ ಕೋರ್ಟ್ ಆದೇಶವಾಗಿ ಎರಡು ವರ್ಷ ಕಳೆದರೂ ಪರಿಹಾರ ಮಾತ್ರ ಸಿಕ್ಕಿಲ್ಲ.


ಉದಯವಾಹಿನಿ ಚಿತ್ರ

> ಮುಂದುವರೆದು, ರೈತನ ಅರ್ಜಿಯನ್ನು ಪುರಸ್ಕರಿಸಿದ ಗದಗ ಜಿಲ್ಲಾ ನ್ಯಾಯಾಲಯವು, ಬಾಕಿ ಇರುವ ಬೃಹತ್ ಪರಿಹಾರ ಮೊತ್ತವನ್ನು ಪಾವತಿಸದ ಕಾರಣ ಜಿಲ್ಲಾಧಿಕಾರಿ ಕಚೇರಿಯ ಆಸ್ತಿ ಹಾಗೂ ಕಾರನ್ನು ಜಪ್ತಿ ಮಾಡಲು ಆದೇಶಿಸಿತು.

## ಮೂಲಸೌಕರ್ಯ ಹಾಗೂ ಸಾರ್ವಜನಿಕ ಸಮಸ್ಯೆಗಳ ಈಡೇರಿಕೆಗೆ ಆಗ್ರಹಿಸಿ ಸಿ.ಪಿ.ಐ.ಯಿಂದ ತಾಲ್ಲೂಕು ಆಡಳಿತಕ್ಕೆ ಮನವಿ

**• ಉದಯವಾಹಿನಿ,ಜೇವರಗಿ:**

ತಾಲ್ಲೂಕಿನಾದ್ಯಂತ ಸಾರ್ವಜನಿಕರು ಎದುರಿಸುತ್ತಿರುವ ಮೂಲಭೂತ ಸಮಸ್ಯೆಗಳನ್ನು ತಕ್ಷಣವೇ ಪರಿಹರಿಸಬೇಕೆಂದು ಆಗ್ರಹಿಸಿ, ಭಾರತ ಕಮ್ಯೂನಿಸ್ಟ್ ಪಕ್ಷದ (ಸಿ.ಪಿ.ಐ) ಜೇವರಗಿ ತಾಲ್ಲೂಕು ಮಂಡಳಿಯ ವತಿಯಿಂದ ತಾಲ್ಲೂಕು ದಂಡಾಧಿಕಾರಿಗಳಿಗೆ (ತಹಶೀಲ್ದಾರ್) ಸುದೀರ್ಘ ಬೇಡಿಕೆಗಳ ಮನವಿ ಪತ್ರವನ್ನು ಸಲ್ಲಿಸಲಾಯಿತು.

'ಬದಲಾವಣೆ ಅಗತ್ಯವಾಗಿದೆ' ಎಂಬ ಘೋಷಣೆಯೊಂದಿಗೆ ಆಯೋಜಿಸಲಾಗಿದ್ದ ಪಾದಯಾತ್ರೆಯ ಭಾಗವಾಗಿ, ಆಗಸ್ಟ್ 14ರಂದು ಜೇವರಗಿ ತಾಲ್ಲೂಕು ಕಚೇರಿಗೆ ತೆರಳಿದ ನಿಯೋಗವು ಸಾರ್ವಜನಿಕರ ಪ್ರಮುಖ ಸಮಸ್ಯೆಗಳನ್ನು ಬಗೆಹರಿಸಲು ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿತು.

ಕೊಡಚಿ, ಖಾದ್ಯಾಪೂರ, ಮದರಿ, ಕಾಸರಭೋಸಗಾ, ಕಲ್ಲೂರ ಸೇರಿದಂತೆ ತಾಲ್ಲೂಕಿನ ಎಲ್ಲಾ ಗ್ರಾಮಗಳು ಹಾಗೂ ಜೇವರಗಿ ನಗರದ ವಾರ್ಡ್‌ಗಳಲ್ಲಿ ಶುದ್ಧ ಕುಡಿಯುವ ನೀರು, ರಸ್ತೆ, ಚರಂಡಿ, ಸಾರ್ವಜನಿಕ ಶೌಚಾಲಯ, ಬೀದಿ ದೀಪ, ಬಸ್ ವ್ಯವಸ್ಥೆ ಹಾಗೂ ಶಾಲೆಗಳಿಗೆ ಅಗತ್ಯ ಶಿಕ್ಷಕರನ್ನು ಒದಗಿಸುವುದು. ಗ್ರಾಮಗಳಲ್ಲಿ ಕೃಷಿ ಕೂಲಿಕಾರರಿಗೆ ಉದ್ಯೋಗ ಖಾತ್ರಿ ಕೆಲಸ ಪ್ರಾರಂಭಿಸುವುದು. ವಸತಿ ರಹಿತರಿಗೆ ಜಮೀನು ಮೀಸಲಿಟ್ಟು, ಮನೆ ನಿರ್ಮಾಣ ಧನಸಹಾಯವನ್ನು ಕನಿಷ್ಠ 5 ಲಕ್ಷಕ್ಕೆ ಹೆಚ್ಚಿಸುವುದು.


ಉದಯವಾಹಿನಿ ಚಿತ್ರ

> ಚಿಕ್ಕಮುದವಾಳದಿಂದ ಚಾಮನಾಳ ಹಾಗೂ ಇತರ ರಸ್ತೆಗಳ ಕಳಪೆ ಕಾಮಗಾರಿ ನಡೆಸಿದ ಅಧಿಕಾರಿಗಳು ಮತ್ತು ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದು.

ಸ್ಥಗಿತಗೊಂಡಿರುವ ವಿಧವಾ, ವೃದ್ಧಾಪ್ಯ ಹಾಗೂ ವಿಶೇಷ ಚೇತನರ ಮಾಸಾಶನಗಳನ್ನು ತಕ್ಷಣ ಬಿಡುಗಡೆ ಮಾಡಿ, ಕನಿಷ್ಠ 3,000ಕ್ಕೆ ಹೆಚ್ಚಿಸುವುದು.ಕಲಬುರಗಿಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸುವುದು, ಸರ್ಕಾರಿ ಜಮೀನಿನಲ್ಲಿ ಮನೆ ಕಟ್ಟಿಕೊಂಡ ಬಡವರಿಗೆ ಹಕ್ಕುಪತ್ರ ವಿತರಣೆ, ಮಲ್ಲಾಬಾದ್ ಏತ ನೀರಾವರಿ ಯೋಜನೆಯನ್ನು ಶೀಘ್ರ ಪೂರ್ಣಗೊಳಿಸುವುದು, ಖಾಲಿ ಇರುವ ಸರ್ಕಾರಿ ಹುದ್ದೆಗಳ ಭರ್ತಿ ಹಾಗೂ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರದ ಸಮಗ್ರ ತನಿಖೆಗೆ ಒತ್ತಾಯಿಸಲಾಯಿತು.

## ಬೆಳಗಾವಿ, ಹುಬ್ಬಳ್ಳಿಯಲ್ಲಿ ಸಡಗರ ಸಂಭ್ರಮದಿಂದ 80ನೇ ಸ್ವಾತಂತ್ರ್ಯೋತ್ಸವ ಆಚರಣೆ

### ಸ್ವಾತಂತ್ರ್ಯ ಹೋರಾಟದಲ್ಲಿ ನಮ್ಮ ಬೆಳಗಾವಿ ಜಿಲ್ಲೆಯ ಪಾತ್ರವು ಕಡಿಮೆ ಇಲ್ಲ. ಅಪ್ರತಿಮ ಹೋರಾಟಗಾರರು, ಅಪ್ಪಟ ದೇಶಭಕ್ತರು

**• ಉದಯವಾಹಿನಿ, ಹುಬ್ಬಳ್ಳಿ:**

ಜಿಲ್ಲೆಗಳಲ್ಲಿ 80ನೇ ಸ್ವಾತಂತ್ರ್ಯೋತ್ಸವ ವಿಜೃಂಭಣೆಯಿಂದ ನಡೆದಿದ್ದು, ಧ್ವಜಾರೋಹಣ ನೆರವೇರಿಸಲಾಯಿತು.

ಬೆಳಗಾವಿಯಲ್ಲಿ 80ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ನಿಮಿತ್ತ ಇಲ್ಲಿನ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ಬೆಳಗ್ಗೆ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಧ್ವಜಾರೋಹಣ ನೆರವೇರಿಸಿದರು.ಪೊಲೀಸರು, ವಿವಿಧ ಶಾಲಾ - ಕಾಲೇಜುಗಳ ವಿದ್ಯಾರ್ಥಿಗಳು ಆಕರ್ಷಕ ಪಥಸಂಚಲನ ನಡೆಸಿದರು. ಸತೀಶ ಜಾರಕಿಹೊಳಿ ಅವರಿಗೆ ಗೌರವ ವಂದನೆ ಸ್ವೀಕರಿಸಿದರು. ಅಂಧ ಮಕ್ಕಳು, ಮಹಾನಗರ ಪಾಲಿಕೆ ಪೌರ ಕಾರ್ಮಿಕರ ತಂಡವು

> 1 : ಕರ್ನಾಟಕದ ಖಾದಿ ಭಗೀರಥ
> 2 : ಏಳು ಆಂಗ್ಲರ ಬಂದೂಕು
> 3 : ಫ್ಲೈ-ಓವರ್ ನಿರ್ಮಾಣಕ್ಕಾಗಿ

ಪಥಸಂಚಲನದಲ್ಲಿ ಭಾಗವಹಿಸಿ ಎಲ್ಲರ ಗಮನ ಸೆಳೆದರು. ಸ್ವಾತಂತ್ರ್ಯ ಹೋರಾಟದಲ್ಲಿ ನಮ್ಮ ಬೆಳಗಾವಿ ಜಿಲ್ಲೆಯ ಪಾತ್ರವು ಕಡಿಮೆ ಇಲ್ಲ. ಅಪ್ರತಿಮ ಹೋರಾಟಗಾರರು, ಅಪ್ಪಟ ದೇಶಭಕ್ತರು, ಸ್ವಾಭಿಮಾನಿ ಸೇನಾನಿಗಳನ್ನು ದೇಶಕ್ಕೆ ಕೊಡುಗೆ ನೀಡಿರುವ ನಮ್ಮ ಜಿಲ್ಲೆಯು ಸ್ವಾತಂತ್ರ್ಯ ಹೋರಾಟದಲ್ಲಿ ಮುಂಚೂಣಿಯಲ್ಲಿತ್ತು ಎಂಬುದು ಎಲ್ಲರಿಗೂ ತಿಳಿದ ವಿಷಯ. ಕಿತ್ತೂರು ರಾಣಿ ಚೆನ್ನಮ್ಮ ಮೊಳಗಿಸಿದ ಸ್ವಾತಂತ್ರ್ಯದ ಕಹಳೆಯು ಕಾಡ್ಗಿಚ್ಚಿನಂತೆ ಎಲ್ಲೆಡೆ ಹಬ್ಬಿತು.


ಉದಯವಾಹಿನಿ ಚಿತ್ರ


ಸ್ವಾತಂತ್ರ್ಯ ಹೋರಾಟಕ್ಕೆ ಧುಮುಕಿದ ಮೊದಲ ಮಹಿಳೆ ಎಂಬ ಹೆಗ್ಗಳಿಕೆ ಹೊಂದಿದ್ದ ಚೆನ್ನಮ್ಮ, ಆಂಗ್ಲರ ಈಸ್ಟ್ ಇಂಡಿಯಾ ಕಂಪನಿಗೆ ದುಸ್ವಪ್ನವಾಗಿ ಕಾಡಿದಳು. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಹಾಗೂ ಬಾಲಾನಾಯ್ಕ ಬಿನ್ ಮಲ್ಲಾನಾಯಕ, ಕಲಬಸಪ್ಪ ಬಿನ್ ಕಲ್ಲಪ್ಪ, ಭೀಮ ಜಿಡ್ಡಿಮನಿ, ಅಪ್ಪಾಜಿ ಕೆಂಚಾನಾಯಕ, ಬಸವಲಿಂಗಪ್ಪ ಮತ್ತು ಕೆಂಚಪ್ಪ ಬಿನ್ ರುದ್ರಪ್ಪ ಈ ಏಳು ಜನರು ಆಂಗ್ಲರ ಬಂದೂಕುಗಳಿಗೆ ಬೆದರದೇ ತಾಯ್ನಾಡಿನ ಸ್ವಾತಂತ್ರ್ಯಕ್ಕಾಗಿ ನಂದಗಡದಲ್ಲಿ ನೇಣುಗಂಬಕ್ಕೇರಿದ ಅಪ್ರತಿಮ ದೇಶಭಕ್ತರು.

> ಚೆನ್ನಮ್ಮ, ಆಂಗ್ಲರ ಈಸ್ಟ್ ಇಂಡಿಯಾ ಕಂಪನಿಗೆ ದುಸ್ವಪ್ನವಾಗಿ ಕಾಡಿದಳು.

ಸಂಗೊಳ್ಳಿ ರಾಯಣ್ಣ ಹುಟ್ಟಿದ್ದು ಆಗಸ್ಟ್ 15ರಂದು ವೀರಮರಣವನ್ನಪ್ಪಿದ್ದು ಜನವರಿ 26 ಎಂದು ಸಚಿವರು ಸ್ಮರಿಸಿಕೊಂಡರು.ಇನ್ನು, ಸ್ವಾತಂತ್ರ್ಯೋತ್ಸವದ ಈ ಸಂದರ್ಭದಲ್ಲಿ ಬೆಳಗಾವಿ ನಗರ ಸೇರಿದಂತೆ ನಮ್ಮ ಜಿಲ್ಲೆಯಲ್ಲಿ ಹಲವು ಅಭಿವೃದ್ಧಿ ಕೈಗೆತ್ತಿಕೊಂಡಿದ್ದೇವೆ. ಲೋಕೋಪಯೋಗಿ ಇಲಾಖೆಯಿಂದ ಬೆಳಗಾವಿ

> ಸಿಎಂ ಡಿ.ಕೆ.ಶಿವಕುಮಾರ್ ಅವರ ನೇತೃತ್ವದಲ್ಲಿ ನಮ್ಮ ಸರ್ಕಾರವು ಅನೇಕ ಜನಪರ ಕಾರ್ಯಕ್ರಮಗಳನ್ನು ರೂಪಿಸಿದೆ. ಸಾಮಾಜಿಕ ನ್ಯಾಯ ಹಾಗೂ ಸಮಾನತೆಯ ಹಾದಿಯಲ್ಲಿ ದೃಢವಾದ ಹೆಜ್ಜೆಯನ್ನು ಇಟ್ಟಿದೆ ಎಂದು ಅಭಿಪ್ರಾಯ ಪಟ್ಟರು. -ಸತೀಶ ಜಾರಕಿಹೊಳಿ

ನಗರದ ಸಂಕಮ ಹೋಟೆಲ್‌ನಿಂದ ಅಶೋಕ ವೃತ್ತದ ಸಂಗೊಳ್ಳಿ ರಾಯಣ್ಣ ವೃತ್ತದ ಮುಖಾಂತರ ರಾಣಿ ಚೆನ್ನಮ್ಮ ವೃತ್ತದವರೆಗೆ ಫ್ಲೈ-ಓವರ್ ನಿರ್ಮಾಣಕ್ಕಾಗಿ ರೂ. 275.53 ಕೋಟಿ ಅನುದಾನ ಬಿಡುಗಡೆ ಆಗಿದೆ. ಇದೇ ಆಗಸ್ಟ್ 17 ಟೆಂಡರ್ ಸ್ವೀಕರಿಸಲು ಕೊನೆಯ ದಿನ. ಇನ್ನು ಕಾಮಗಾರಿಯ ಎರಡನೇ ಹಂತದಲ್ಲಿ ಚನ್ನಮ್ಮಾ ವೃತ್ತದಿಂದ ಧರ್ಮವೀರ ಸಂಭಾಜಿ ವೃತ್ತದವರೆಗೆ ಫ್ಲೈ-ಓವರ್ ನಿರ್ಮಾಣಕ್ಕಾಗಿ 240 ಕೋಟಿಗಳ ಅನುದಾನವು ಅನುಮೋದನೆಯಾಗಿದ್ದು, ಈ ಕಾಮಗಾರಿಗೆ ಡಿ.ಪಿ.ಆರ್ ತಯಾರಿಸಲು ವಿವಿಧ ಸ್ಥಳಗಳಲ್ಲಿ ಮಣ್ಣಿನ ಹಾಗೂ ಇತರ ಸ್ಥಳಗಳಲ್ಲಿ ಪರೀಕ್ಷೆಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

### 'ಕರ್ನಾಟಕದ ಸಿಂಹ' 'ಕರ್ನಾಟಕದ ಖಾದಿ ಭಗೀರಥ'

> ಸ್ವಾತಂತ್ರ್ಯ ಹೋರಾಟದಲ್ಲಿ ಮುಂಚೂಣಿಯಲ್ಲಿದ್ದ ಮತ್ತೊಬ್ಬ ಮಹನೀಯರು ಶ್ರೀ ಗಂಗಾಧರ ದೇಶಪಾಂಡೆ. 'ಕರ್ನಾಟಕದ ಸಿಂಹ' ಹಾಗೂ 'ಕರ್ನಾಟಕದ ಖಾದಿ ಭಗೀರಥ' ಎಂದು ಗುರುತಿಸಿಕೊಂಡಿದ್ದ ದೇಶಪಾಂಡೆಯವರ ಕೊಡುಗೆ ಅಪಾರ. ಇವರ ಜೊತೆಗೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿದ್ದ ಅನೇಕರನ್ನು ಇಂದು ನಾವು ನೆನಪಿಸಿಕೊಳ್ಳಬೇಕು.

ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 3 ವಿಭಾಗಗಳ (ಬೆಳಗಾವಿ, ಚಿಕ್ಕೋಡಿ ಹಾಗೂ ಧಾರವಾಡ) ಅಡಿ ಒಟ್ಟು 16 ಬಸ್ ಘಟಕಗಳಿಂದ ಬಸ್ ಕಾರ್ಯಾಚರಣೆ ಮಾಡಲಾಗುತ್ತಿದೆ. ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 16 ಬಸ್ ಘಟಕಗಳಿಂದ 1661 ಬಸ್‌ಗಳು ಪ್ರತಿದಿನ ಕಾರ್ಯಾಚರಣೆ ಮಾಡಲಾಗುತ್ತಿದೆ. ಶಕ್ತಿ ಯೋಜನೆ ಅಡಿ 11-ಜೂನ್ -2023 ರಿಂದ 31-ಜುಲೈ 2026 ವರೆಗೆ (1147 ದಿನಗಳು) ಒಟ್ಟು 92.24 ಕೋಟಿ ಪ್ರಯಾಣಿಕರಲ್ಲಿ,

61.79 ಕೋಟಿ ಮಹಿಳಾ ಪ್ರಯಾಣಿಕರು (ಶೇಕಡಾ 67.0) ಪ್ರಯಾಣಿಸಿದ್ದು, 1,599 ಕೋಟಿ ರೂಪಾಯಿ ಮೊತ್ತದ ಶೂನ್ಯ ಟಿಕೆಟ್ ವಿತರಿಸಲಾಗಿದೆ ಎಂದು ಸತೀಶ ಜಾರಕಿಹೊಳಿ ಹೇಳಿದರು.